# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಮಾತೃದೇವತೆಯ ಕೋಪ ಬದುಕು ಕಳೆಸುವುದು
ಜನುಮದಾತನ ಕೋಪ ದಾರಿ ಸುಗಮಗೊಳಿಸುವುದು
ಗುರುವಿನ ಕೋಪ ಜ್ಞಾನಾಭಿವೃದ್ಧಿ ಮಾಡುವುದು
ಹೆಣ್ಣಿನ ಕೋಪ ಜೀವನವನ್ನೇ ಮುಗಿಸುವುದು
ವೈರಾಗಿಯ ಕೋಪ ಮತಿ ಕೆಡಿಸುವುದು
ಹಿರಿಯರ ಕೋಪ ಕರ್ಮ ಹೆಚ್ಚಿಸುವುದು
ದೇವಾರಿ ದೇವತೆಯ ಕೋಪ ಕುಂಠಿತಗೊಳಿಸುವುದು
ಬಡವನ ಕೋಪ ದವಡೆಗೆ ಮೂಲವಾಗುವುದು
ಅನ್ನದಾತನ ಕೋಪ ಹಸಿವಿನಿಂದ ನರಳಿಸುವುದು
ಕೋಪ ತಾಪವ ಬಿಟ್ಟು ಬದುಕಿದರೆ ಮುಕ್ತಿ ಸಿಗುವುದು
**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 21-08-2026 to 27-08-2026 ಬೆಲೆ:10-00 ಸಂಪುಟ–1 ಸಂಚಿಕೆ–47 ಪುಟಗಳು–6









ನಾಗರಪಂಚಮಿಯು ಕರಾವಳಿಯ ಜನರಲ್ಲಿ ಹೊಸ ಹರ್ಷ ಮತ್ತು ಭಕ್ತಿಯ ಹೊನಲು ಮನೆಮಾಡಿತ್ತು. ಅದರಲ್ಲಿಯೂ ಈ ದಿನ ಸಾರ್ವಜನಿಕ ರಜೆ ಘೋಷಣೆಯಾದ ಹಿನ್ನಲೆ ಹೆಚ್ಚಿನ ಸಂಖ್ಯೆಯಲ್ಲಿ ತಮ್ಮ ಆದಿ ನಾಗಸ್ಥಾನಗಳಿಗೆ ಮತ್ತು ದೇವಾಲಯಗಳಿಗೆ ಬೇಟಿ ನೀಡಿ ನಾಗದೇವರಿಗೆ ಹಾಲು–ಎಳೆನೀರಿನ ಅಭಿಷೇಕ ನೆರವೇರಿಸಿ, ಶ್ರದ್ಧಾ–ಭಕ್ತಿಗಳಿಂದ ಪೂಜೆ ಸಲ್ಲಿಸಿ, ನಾಗದೇವರ ಕೃಪೆಗೆ ಪಾತ್ರರಾಗಿ ಹಬ್ಬವನ್ನು ಅತ್ಯಂತ ಸೌಹಾರ್ದತೆಯಿಂದ ಸಂಭ್ರಮಿಸಿದರು.

## ನೈಸ್ ಅಕ್ರಮದಲ್ಲಿ ಡಿಕೆಶಿ ಶಾಮೀಲು: ಹೆಚ್‌ಡಿಕೆ



**ಬೆಂಗಳೂರು:** ಬಿಡದಿ ಟೌನ್ ಶಿಪ್ ಯೋಜನೆಗೆ ಸಂಬಂಧಿಸಿದಂತೆ ರಾಜ್ಯ ಸರ್ಕಾರದ ವಿರುದ್ಧ ಬೃಹತ್ ಪ್ರತಿಭಟನೆ ಮತ್ತು ವಿಧಾನಸೌಧ ಚಲೋ ಹಮ್ಮಿಕೊಂಡಿದ್ದ ಜೆಡಿಎಸ್ ಮುಖಂಡರು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ವಿರುದ್ಧ ತೀವ್ರ ವಾಗ್ದಾಳಿ ನಡೆಸಿದ್ದಾರೆ. ಈ ಸಂದರ್ಭದಲ್ಲಿ ಸಚಿವ ಕುಮಾರಸ್ವಾಮಿ ಅವರು, ಸರ್ಕಾರ ಭಂಡತನ ಪ್ರದರ್ಶನ ಮಾಡುತ್ತಿದೆ. ಬಿಡದಿ ಟೌನ್ ಶಿಪ್ ಮತ್ತು ನೈಸ್ ಯೋಜನೆಯ **3ನೇ ಪುಟಕ್ಕೆ**

## ‘ಹೋಮ್ ಮೇಕರ್’ ಪದ ಲಿಂಗತಟಸ್ಥ –ಹೈಕೋರ್ಟ್

**ಬೆಂಗಳೂರು:** ಕುಟುಂಬದ ಸುಖ–ಶಾಂತಿಗೆ ಆಧಾರ ಸ್ತಂಭವಾಗಿ ನಿಲ್ಲುವ ಪ್ರತಿಯೊಬ್ಬ ವ್ಯಕ್ತಿಯೂ ‘ಹೋಮ್ ಮೇಕರ್’ ಆಗಿದ್ದಾರೆ. ಇದು ಪುರುಷರಿಗೂ ಅನ್ವಯಿಸುತ್ತದೆ. ದುಡಿಯುವ ಉದ್ಯೋಗಸ್ಥರಿಗೂ ಅನ್ವಯ. ಕುಟುಂಬದ ಆರೈಕೆ ಮತ್ತು ಜವಾಬ್ದಾರಿಗಳನ್ನು ಹೊರುವ ‘ಹೋಮ್ ಮೇಕರ್’ ಎಂಬ ಪದವು ಕೇವಲ ಮಹಿಳೆಯರಿಗೆ ಮಾತ್ರ ಸೀಮಿತವಾಗಿಲ್ಲ, ಅದು ಸಂಪೂರ್ಣವಾಗಿ ಲಿಂಗತಟಸ್ಥ. ಪುರುಷನಾಗಲಿ, ಮಹಿಳೆಯಾಗಲಿ ಅಥವಾ ಉದ್ಯೋಗದಲ್ಲಿರುವ ವೃತ್ತಿಪರರಾಗಲಿ, ಮನೆಯಲ್ಲಿ ಕುಟುಂಬದ ಕಲ್ಯಾಣಕ್ಕಾಗಿ ಶ್ರಮಿಸುವ ಪ್ರತಿಯೊಬ್ಬರೂ ‘ಗೃಹ ನಿರ್ವಾಹಕರು’ ಎಂದು ಪರಿಗಣಿಸಲ್ಪಡುತ್ತಾರೆ ಎಂದು ಹೈಕೋರ್ಟ್ ಸ್ಪಷ್ಟಪಡಿಸಿದೆ. ರಸ್ತೆ ಅಪಘಾತದಲ್ಲಿ ಶಾಶ್ವತ ಅಂಗವೈಕಲ್ಯಕ್ಕೆ ತುತ್ತಾಗಿದ್ದ ಮಹಿಳೆಗೆ ಮೋಟಾರು ಅಪಘಾತಗಳ ಪರಿಹಾರ ನ್ಯಾಯಾಧಿಕರಣ ನೀಡಿದ್ದ ಪರಿಹಾರ ಮೊತ್ತ **3ನೇ ಪುಟಕ್ಕೆ**



## ಪ್ರಾಣರಕ್ಷಕ ಮದ್ದುಗಳ ಹೆಸರಲ್ಲಿ ಕಿಲ್ಲರ್ ಜಾಲ..

**ಬೆಂಗಳೂರು:** ಜನರ ಜೀವ ಕಾಯಬೇಕಾದ ಮದ್ದುಗಳೇ ಈಗ ಪ್ರಾಣಕ್ಕೆ ಕಂಟಕವಾಗುತ್ತಿವೆಯೇ ಎಂಬ ಭೀತಿ ಮೂಡಿಸುವಂತಹ ಅತ್ಯಂತ ಆಘಾತಕಾರಿ ಘಟನೆಯೊಂದು ರಾಜಧಾನಿ ಬೆಂಗಳೂರಿನ ಹೊರವಲಯದಲ್ಲಿ ಬಯಲಾಗಿದೆ. ರಾಮನಗರ ಜಿಲ್ಲೆಯ ಬಿಡದಿ ಸಮೀಪದ ಕೃಷಿ ಫಾರ್ಮ್‌ಹೌಸ್ ಒಂದನ್ನು ಅಡ್ಡಾವಾಗಿರಿಸಿಕೊಂಡು ಅತ್ಯಂತ ಮುನ್ನೆಚ್ಚರಿಕೆಯಿಂದ ನಡೆಸಲಾಗುತ್ತಿದ್ದ ಬೃಹತ್ ನಕಲಿ ಔಷಧ ಮರು–ಪ್ಯಾಕಿಂಗ್ ಮತ್ತು ಲೇಬಲಿಂಗ್ ಜಾಲವನ್ನು ಆಹಾರ ಸುರಕ್ಷತೆ ಮತ್ತು ಔಷಧ ಆಡಳಿತ **3ನೇ ಪುಟಕ್ಕೆ**









# ಸುದ್ದಿ ತುಣುಕು

ದೇಶದಲ್ಲಿ ಮೊದಲ ಬಾರಿಗೆ ಹುಬ್ಬಳ್ಳಿ ಕೆಎಂಸಿ ಆರ್‌ಐನ ಬಹುಶಿಸ್ತೀಯ ಅಧ್ಯಯನ ಘಟಕ (MRU), ಕ್ರಿಮಿನಾಶಕ ಬಳಕೆಯಿಂದ ರೈತರ ಮೇಲಾಗುತ್ತಿರುವ ದುಷ್ಪರಿಣಾಮ ಬಗ್ಗೆ ಸಂಶೋಧನೆ ನಡೆಸಿದ್ದು, ಅನೇಕ ಬೆಚ್ಚಿಬೀಳಿಸುವ ಸಂಗತಿಗಳು ಬಯಲಾಗಿವೆ.

ಸಕಲೇಶಪುರ–ಸುಬ್ರಹ್ಮಣ್ಯ ಮಾರ್ಗದಲ್ಲಿ 'ವಂದೇ ಭಾರತ್' ರೈಲಿನ ಪ್ರಾಯೋಗಿಕ ಸಂಚಾರ ಯಶಸ್ವಿಯಾಗಿ ನಡೆಯಿತು.

ಬಾಲಕನಿಗೆ ವಾಹನ ಚಲಾಯಿಸಲು ನೀಡಿದ್ದ ತಂದೆಗೆ (ಬೈಕ್ ಮಾಲೀಕ) ಭದ್ರಾವತಿ ಒಂದನೇ ಎಸಿಜೆ ಮತ್ತು ಜೆಎಂಎಫ್‌ಸಿ ನ್ಯಾಯಾಲಯ 27 ಸಾವಿರ ರೂಪಾಯಿ ದಂಡ ವಿಧಿಸಿ ಆದೇಶಿಸಿದೆ.

ಭೂಸ್ವಾಧೀನಾಧಿಕಾರಿ ಮಲ್ಲಿಕಾರ್ಜುನ ಬಿ ಅವರಿಗೆ ಸೇರಿದ 11 ಸ್ಥಳಗಳಲ್ಲಿ ದಾಳಿ ನಡೆಸಿರುವ ಲೋಕಾಯುಕ್ತ ಪೊಲೀಸರು 12.95 ಕೋಟಿ ರೂ ಮೌಲ್ಯದ ಅಕ್ರಮ ಆಸ್ತಿ ಪತ್ತೆ ಹಚ್ಚಿದ್ದಾರೆ.

ಜಾತಿ ಪ್ರಮಾಣಪತ್ರ ಪಡೆಯಬೇಕಾದರೆ ಜನರು ಸ್ವತಃ ಕಚೇರಿಗೆ ಹೋಗಿ ಅರ್ಜಿ ಸಲ್ಲಿಸಿ, ಪರಿಶೀಲನೆ ಮುಗಿಯುವವರೆಗೆ ಕಾಯಬೇಕಿಲ್ಲ. ಸರ್ಕಾರವೇ ಜನರ ಮನೆ ಬಾಗಿಲಿಗೆ ತಲುಪಿಸುತ್ತಿದೆ.

ಆದಾಯ ಮೀರಿ ಆಸ್ತಿ ಗಳಿಸಿರುವ ಆರೋಪ ಸಂಬಂಧ ಮಾಜಿ ಶಾಸಕ ಪ್ರೀತಂ ಗೌಡ ವಿರುದ್ಧ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತಕ್ಕೆ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯ ಆದೇಶಿಸಿದೆ.

ಸಾಲ ತೀರಿಸಲಾಗದೆ ರೈತ ಆತ್ಮಹತ್ಯೆ ಮಾಡಿಕೊಂಡ ಹಿನ್ನೆಲೆಯಲ್ಲಿ ಪರಿಹಾರ ಕೋರಿದ್ದ ಮನವಿಯನ್ನು ಪರಿಗಣಿಸಬೇಕು ಎಂದು ಸರ್ಕಾರಕ್ಕೆ ಹೈಕೋರ್ಟ್ ಸೂಚಿಸಿದೆ.

ನೈರುತ್ಯ ರೈಲ್ವೆ ಪ್ರಯಾಣಿಕರ ಅನುಕೂಲಕ್ಕಾಗಿ ರೈಲುಗಳನ್ನು ಘಟಪ್ರಭಾ ನಿಲ್ದಾಣದಲ್ಲಿ ಮುಂದಿನ ಸೂಚನೆ ಬರುವವರೆಗೂ ಪ್ರಾಯೋಗಿಕ ನಿಲುಗಡೆ ಮಾಡಲು ನಿರ್ಧರಿಸಿದೆ.

ರಾಷ್ಟ್ರೋತ್ಥಾನ ವಿದ್ಯಾಸಂಸ್ಥೆಯ ವಿದ್ಯಾರ್ಥಿಗಳು ಲೈಸೆನ್ಸ್‌ನಿಂದ ಮಾತ್ರ ವಾಹನ ಸ್ಟಾರ್ಟ್ ಆಗುವಂತಹ ಪ್ರಾಜೆಕ್ಟ್ ತಯಾರಿಸಿ ಗಮನ ಸೆಳೆದಿದ್ದಾರೆ.

ಗೋವುಗಳ ಕಳ್ಳಸಾಗಣೆ ತಡೆಯಲು ಹೋದವರ ಮೇಲೆ ನಡೆದಿದ್ದ ಹಲ್ಲೆ ಖಂಡಿಸಿ, ಶಿಕಾರಿಪುರದಲ್ಲಿ ಬಂದ್ ನಡೆಸಲಾಯಿತು. ಸಂಸದ ಬಿ.ವೈ. ರಾಘವೇಂದ್ರ ಪ್ರತಿಭಟನಾ ಮೆರವಣಿಗೆಯಲ್ಲಿ ಭಾಗವಹಿಸಿ ಬೆಂಬಲ ಸೂಚಿಸಿದರು.

ಮೈಸೂರು ಅಭಿವೃದ್ಧಿ ಪ್ರಾಧಿಕಾರದ 50:50 ಬದಲಿ ನಿವೇಶನ ಹಂಚಿಕೆ ರದ್ದುಪಡಿಸಿ ಮಹತ್ವದ ಆದೇಶ ಹೊರಡಿಸಲಾಗಿದೆ ಎಂದು ನಗರಾಭಿವೃದ್ಧಿ ಸಚಿವ ಯತೀಂದ್ರ ಸಿದ್ದರಾಮಯ್ಯ ತಿಳಿಸಿದ್ದಾರೆ.

ಪ್ರಧಾನಿ ನರೇಂದ್ರ ಮೋದಿ ಅವರು ಸ್ವಾತಂತ್ರ್ಯ ದಿನಾಚರಣೆ ಭಾಷಣದಲ್ಲಿ ಸ್ಪರ್ಧಾತ್ಮಕ ಪರೀಕ್ಷಾರ್ಥಿಗಳಿಗೆ 'ಉಚಿತ ಆನ್ ಲೈನ್ ತರಬೇತಿ' ಯೋಜನೆ ಘೋಷಿಸಿದ್ದು, ನಾಲ್ಕೇ ದಿನದಲ್ಲಿ ಶಿಕ್ಷಣ ಸಚಿವರು ಅದನ್ನು ಸಾಕಾರಗೊಳಿಸುವ ನಿಟ್ಟಿನಲ್ಲಿ ತ್ವರಿತ ಪ್ರಯತ್ನ ನಡೆಸಿದ್ದಾರೆ.

ಶಿಕ್ಷಣ ಸಚಿವ ಪ್ರಲ್ಹಾದ್ ಜೋಶಿ ಅವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಪರೀಕ್ಷೆ ಸುಗಮವಾಗಿ ನಡೆಸಲು ಅಗತ್ಯವಿರುವ ಎಲ್ಲಾ ಭದ್ರತಾ ಹಾಗೂ ಸಂಬಂಧಿತ ಮೂಲಸೌಕರ್ಯ ವ್ಯವಸ್ಥೆಗಳನ್ನು ಕಲ್ಪಿಸುವಂತೆ ನಿರ್ದೇಶನ ನೀಡಲಾಗಿದೆ.

# ಅಕ್ಕಿ ಉಂಡೆ



**ಬೇಕಾಗುವ ಪದಾರ್ಥಗಳು :**

ಕುಚಲಕ್ಕಿ – 1 ಕಪ್
ಬೆಲ್ಲ – 3/4 ಕಪ್
ತೆಂಗಿನಕಾಯಿ ತುರಿ – 1/2 ಕಪ್
ಏಲಕ್ಕಿ ಪುಡಿ – 1/2 ಚಮಚ
ಬಿಳಿಎಳ್ಳು – 1 ಚಮಚ
ತುಪ್ಪ – 2–3 ಚಮಕ
ನೀರು – 1/4 ಕಪ್

**ತಯಾರಿಸುವ ವಿಧಾನ :**

ಮೊದಲಿಗೆ ಅಕ್ಕಿಯನ್ನು ಚೆನ್ನಾಗಿ ತೊಳೆದು, ಬಟ್ಟೆಯ ಮೇಲೆ ಹರಡಿ ಒಣಗಿಸಿ. ನಂತರ ಬಾಣಲೆಗೆ ಹಾಕಿ ಸಣ್ಣ ಉರಿಯಲ್ಲಿ ಹೊಂಬಣ್ಣ ಬರುವವರೆಗೆ ಹುರಿದು, ತಣ್ಣಗಾದ ಮೇಲೆ ತರಿತರಿಯಾಗಿ ರವೆ ಹಿಟ್ಟು ಮಾಡಿಕೊಳ್ಳಬೇಕು. ನಂತರ ಅದೇ ಬಾಣಲೆಯಲ್ಲಿ ಬಿಳಿ ಎಳ್ಳನ್ನು ಚಿಟಪಟ ಎನ್ನುವವರೆಗೆ ಹುರಿದು ಇಟ್ಟುಕೊಳ್ಳಿ. ಪಾತ್ರೆಗೆ ತುರಿದ ಬೆಲ್ಲ ಮತ್ತು 1/4 ಕಪ್ ನೀರು ಹಾಕಿ ಬೆಲ್ಲವನ್ನು ಕರಗಿಸಿ. ಬೆಲ್ಲ ಕರಗಿ ಒಂದು ಎಳೆ ಪಾಕಕ್ಕಿಂತ ಸ್ವಲ್ಪ ಕಡಿಮೆ ಬಂದ ತಕ್ಷಣ ಗ್ಯಾಸ್ ಆಫ್ ಮಾಡಿ. ಈಗ ಒಂದು ಪಾತ್ರೆಯಲ್ಲಿ ಹುರಿದ ಅಕ್ಕಿ ರವೆಗೆ ತೆಂಗಿನಕಾಯಿ ತುರಿ, ಹುರಿದ ಎಳ್ಳು, ಏಲಕ್ಕಿ ಪುಡಿ ಮತ್ತು ಕಾಯಿಸಿದ ತುಪ್ಪ ಹಾಕಿ ಬೆರೆಸಿ, ಬಿಸಿ ಇರುವ ಬೆಲ್ಲದ ಪಾಕವನ್ನು ಸೋಸಿಕೊಂಡು ಅಕ್ಕಿ ಮಿಶ್ರಣಕ್ಕೆ ಸ್ವಲ್ಪ ಸ್ವಲ್ಪವೇ ಸೇರಿಸುತ್ತಾ ಚೆನ್ನಾಗಿ ಕಲಸಿ. ಮಿಶ್ರಣ ಕೈಗೆ ತಡೆಯುವಷ್ಟು ಬಿಸಿ ಇದ್ದಾಗ, ಕೈಗೆ ಸ್ವಲ್ಪ ತುಪ್ಪ ಸವರಿಕೊಂಡು ಸಣ್ಣ ಸಣ್ಣ ಉಂಡೆಗಳಾಗಿ ಕಟ್ಟಿದರೆ ರುಚಿಯಾದ ಅಕ್ಕಿ ಉಂಡೆ ಸವಿಯಲು ಸಿದ್ಧ.

# ಓಮನ್ ಹಾಗೂ ಇರಾನ್‌ಗೆ ಟ್ರಂಪ್ ಎಚ್ಚರಿಕೆ !




ಹಾರ್ಮೋಜ್ : ಸುಮಾರು ಆರೇಳು ತಿಂಗಳುಗಳಿಂದ ಭುಗಿಲೆದ್ದಿರುವ ಇರಾನ್ ಮತ್ತು ಅಮೆರಿಕ ನಡುವಿನ ತೀವ್ರ ಸಂಘರ್ಷ ಸದ್ಯಕ್ಕೆ ಶಮನಗೊಳ್ಳುವ ಯಾವುದೇ ಲಕ್ಷಣಗಳು ಗೋಚರಿಸುತ್ತಿಲ್ಲ. ಇರಾನ್‌ನ ಇಸ್ಲಾಮಿಕ್ ರೆವೆಲ್ಯೂಷನರಿ ಗಾರ್ಡ್ಸ್ ಜೊತೆ ಕೈಜೋಡಿಸಿ ಪ್ರಮುಖ ಜಲಮಾರ್ಗವಾದ ಹೊರ್ಮುಜ್ ಜಲಸಂಧಿಯನ್ನು ಮತ್ತೆ ತೆರೆಯಲು ಓಮನ್ ಯತ್ನಿಸಿದರೆ, ಆ ದೇಶದ ಮೇಲೆ ಬಾಂಬ್ ದಾಳಿ ನಡೆಸುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ತೀವ್ರ ಎಚ್ಚರಿಕೆ ನೀಡಿದ್ದಾರೆ.

# ಭಾರತದ ಸ್ವಾತಂತ್ರ್ಯ ದಿನಾಚರಣೆ : ನ್ಯೂಜೆರ್ಸಿಯಲ್ಲಿ ದಾಖಲೆ

ಅಮೇರಿಕ : ನ್ಯೂಯಾರ್ಕ್‌ನ ಟ್ರೈ–ಸ್ಟೇಟ್ ಪ್ರದೇಶದಲ್ಲಿ ಭಾರತದ 80ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಅತ್ಯಂತ ವಿಜೃಂಭಣೆಯಿಂದ ಆಚರಿಸಲಾಗಿದ್ದು, ಈ ಸಂಭ್ರಮದ ಭಾಗವಾಗಿ ಹೊಸ ಗಿನ್ನೆಸ್ ವಿಶ್ವ ದಾಖಲೆ ನಿರ್ಮಾಣವಾಗಿದೆ. ಭಾರತದ 80ನೇ ಸ್ವಾತಂತ್ರ್ಯೋತ್ಸವ ಹಾಗೂ ಅಮೆರಿಕದ 250ನೇ ವಾರ್ಷಿಕೋತ್ಸವದ ಜಂಟಿ ಆಚರಣೆಯ ಅಂಗವಾಗಿ ನ್ಯೂಜೆರ್ಸಿಯ ಪಾರ್ಸಿಪ್ಪನಿಯಲ್ಲಿರುವ ವೆಟರನ್ಸ್ ಮೆಮೋರಿಯಲ್ ಪಾರ್ಕ್‌ನಲ್ಲಿ ವಿಶೇಷ ಕಾರ್ಯಕ್ರಮ ಆಯೋಜಿಸಲಾಗಿತ್ತು.




# ಪಾಕಿಸ್ತಾನದಿಂದ 'ಜಿನ್ನಾ–1' ಚಂದ್ರಯಾನ



ಇಸ್ಲಾಮಬಾದ್ : ಭಾರತದ ಯಶಸ್ವಿ ಚಂದ್ರಯಾನ ಯೋಜನೆಯ ಪ್ರೇರಣೆಯಿಂದ ಪಾಕಿಸ್ತಾನವು ತನ್ನದೇ ಆದ ಚಂದ್ರ ಅನ್ವೇಷಣೆ ಯೋಜನೆಯನ್ನು ಘೋಷಿಸಿದೆ. ಚೀನಾದ ಬಾಹ್ಯಾಕಾಶ ಸಂಸ್ಥೆಯ ಬೆಂಬಲದೊಂದಿಗೆ ಪಾಕಿಸ್ತಾನವು 2029ರಲ್ಲಿ ತನ್ನ ಮೊದಲ ಚಂದ್ರಯಾನ ರೋವರ್ 'ಜಿನ್ನಾ–1' ಅನ್ನು ಉಡಾವಣೆ ಮಾಡಲು ಸಿದ್ಧತೆ ನಡೆಸುತ್ತಿದೆ. ಪಾಕಿಸ್ತಾನದ 'ಡಾನ್' ಪತ್ರಿಕೆಯ ವರದಿಯ ಪ್ರಕಾರ, ಈ ರೋವರ್ ಚೀನಾದ 'ಚಾಂಗ್–ಇ–8' ಮಿಷನ್‌ನೊಂದಿಗೆ ಪ್ರಯಾಣಿಸಲಿದೆ.

# ಮೋಡಗಳ ಮೇಲಿಂದ ಸೂರ್ಯಗ್ರಹಣ!

ಕೊಲರಾಡೋ : ಐಸ್‌ಲ್ಯಾಂಡ್ ಕರಾವಳಿಯ ದಟ್ಟ ಮೋಡಗಳ ಮೇಲ್ಭಾಗದಲ್ಲಿ ಹಾರಾಟ ನಡೆಸಿದ ನಾಸಾದ ಡಬ್ಲ್ಯೂಬಿ–57 ಸಂಶೋಧನಾ ವಿಮಾನವು, ಸಂಪೂರ್ಣ ಸೂರ್ಯಗ್ರಹಣವನ್ನು ಅತ್ಯಂತ ಯಶಸ್ವಿಯಾಗಿ ವೀಕ್ಷಿಸಿ ಹೊಸ ವೈಜ್ಞಾನಿಕ ದಾಖಲೆ ಬರೆದಿದೆ. ವಿಜ್ಞಾನಿಗಳ ತಂಡವು, ಭೂಮಿಯ ವಾಯುಮಂಡಲಕ್ಕಿಂತ ಸುಮಾರು 50,000 ಅಡಿ (15,000 ಮೀಟರ್) ಎತ್ತರದಲ್ಲಿ ಚಂದ್ರನ ನೆರಳನ್ನು ಹಿಂಬಾಲಿಸಿ, ಸೌರ ಕರೋನದ ಅಪರೂಪದ ದತ್ತಾಂಶ



ಹಾಗೂ ಅಳತೆಗಳನ್ನು ಸಂಗ್ರಹಿಸಿದೆ.

# ಏಷ್ಯಾದಲ್ಲೇ ಕಡುಬಡವರ ಸಂಖ್ಯೆ ಕಡಿಮೆ: ವಿಶ್ವಬ್ಯಾಂಕ್



ನ್ಯೂ ಯಾರ್ಕ್ : ಕಳೆದ ಕೆಲವು ದಶಕಗಳಿಂದ ಭಾರತದಲ್ಲಿ ಅತೀ ಬಡತನದ ಪ್ರಮಾಣ ಗಣನೀಯವಾಗಿ ಇಳಿಕೆಯಾಗುತ್ತಿದ್ದು, ವಿಶ್ವಬ್ಯಾಂಕ್‌ನ ಇತ್ತೀಚಿನ ದತ್ತಾಂಶವು ಐತಿಹಾಸಿಕ ಬದಲಾವಣೆಯೊಂದನ್ನು ಸೂಚಿಸಿದೆ. ವರದಿಯ ಮುನ್ನೋಟದ ಪ್ರಕಾರ, 2040ರ ವೇಳೆಗೆ ಭಾರತ, ಬಾಂಗ್ಲಾದೇಶ, ನೇಪಾಳ ಮತ್ತು ಶ್ರೀಲಂಕಾ ಒಳಗೊಂಡ ದಕ್ಷಿಣ ಏಷ್ಯಾ ವಲಯದಲ್ಲಿ ಕಡುಬಡವರ ಸಂಖ್ಯೆಯು ಉತ್ತರ ಅಮೆರಿಕ ಹಾಗೂ ಯುರೋಪ್ ಖಂಡಗಳಲ್ಲಿರುವ ಕಡುಬಡವರಿಗಿಂತ ಕಡಿಮೆಯಾಗಲಿದೆ.

# ಗಾಲೆಯಲ್ಲಿ ಭಾರತಕ್ಕೆ ಚಾರಿತ್ರಿಕ 600ನೇ ಟೆಸ್ಟ್ ಸಂಭ್ರಮ

ಗಾಲೆ: ಭಾರತ ಕ್ರಿಕೆಟ್ ತಂಡವು ಗಾಲೆ ಇಂಟರ್‌ನ್ಯಾಷನಲ್ ಸ್ಟೇಡಿಯಂನಲ್ಲಿ ತನ್ನ 600ನೇ ಟೆಸ್ಟ್ ಪಂದ್ಯವನ್ನಾಡುವ ಮೂಲಕ ಹೊಸ ಇತಿಹಾಸ ಬರೆದಿದೆ. 1932ರ ಜೂನ್ 25ರಂದು ಲಾರ್ಡ್ಸ್ ಕ್ರೀಡಾಂಗಣದಲ್ಲಿ ಕರ್ನಲ್ ಕೊಟ್ಟಾರಿ ಕನಕಯ್ಯ ನಾಯುಡು (ಸಿ.ಕೆ. ನಾಯುಡು) ಅವರ ನೇತೃತ್ವದಲ್ಲಿ ತನ್ನ ಮೊದಲ ಟೆಸ್ಟ್ ಪಂದ್ಯನ್ನಾಡಿದ್ದ ಭಾರತ, 94 ವರ್ಷಗಳ ಸುದೀರ್ಘ ಪಯಣದ ನಂತರ ಈ ಅಪರೂಪದ ಮೈಲಿಗಲ್ಲು ತಲುಪಿದೆ. ಶುಭಮನ್ ಗಿಲ್ ನಾಯಕತ್ವದ ಭಾರತ ತಂಡವು ಇಂಗ್ಲೆಂಡ್ ಹಾಗೂ ಆಸ್ಟ್ರೇಲಿಯಾದ



ನಂತರ ಈ ಸಾಧನೆ ಮಾಡಿದ ವಿಶ್ವದ ಮೂರನೇ ತಂಡ ಎನಿಸಿಕೊಂಡಿದೆ.

# ನೊವಾಕ್ ಜೊಕೊವಿಕ್ ಅವರಿಗೆ ಆಘಾತಕಾರಿ ಸೋಲು



ಅಮೇರಿಕ : ಸಿನ್ಸಿನಾಟಿ ಓಪನ್ ಟೆನಿಸ್ ಟೂರ್ನಿಯಲ್ಲಿ 24 ಬಾರಿಯ ಗ್ರ್ಯಾಂಡ್ ಸ್ಲ್ಯಾಮ್ ಚಾಂಪಿಯನ್ ನೊವಾಕ್ ಜೊಕೊವಿಕ್ ಎರಡನೇ ಸುತ್ತಿನಲ್ಲೇ ಆಘಾತಕಾರಿ ಸೋಲು ಅನುಭವಿಸಿ ಕೂಟದಿಂದ ಹೊರಬಿದ್ದಿದ್ದಾರೆ. 2 ಗಂಟೆ 44 ನಿಮಿಷಗಳ ಕಾಲ ನಡೆದ ತೀವ್ರ ಕಾದಾಟದಲ್ಲಿ ಅರ್ಜೆಂಟೀನಾದ 25 ವರ್ಷದ ಆಟಗಾರ ಹಾಗೂ ವಿಶ್ವದ 50ನೇ ಶ್ರೇಯಾಂಕದ ಥಿಯಾಗೊ ಅಗಸ್ಟಿನ್ ಟಿರಾಂಟೆ 2–6, 6–4, 6–4 ಸೆಟ್‌ಗಳಿಂದ ಜೊಕೊವಿಕ್ ಅವರನ್ನು ಪರಾಭವಗೊಳಿಸಿದರು.

# ಆಸ್ಟ್ರೇಲಿಯಾ ನೆಲದಲ್ಲಿ ಬಾಂಗ್ಲಾದೇಶಕ್ಕೆ ಟೆಸ್ಟ್ ಗೆಲುವು

ಆಸ್ಟ್ರೇಲಿಯಾ : ಡಾರ್ವಿನ್‌ನ ಮರಾರಾ ಕ್ರಿಕೆಟ್ ಮೈದಾನದಲ್ಲಿ ನಡೆದ ಎರಡು ಪಂದ್ಯಗಳ ಸರಣಿಯ ಮೊದಲ ಟೆಸ್ಟ್‌ನಲ್ಲಿ ಬಾಂಗ್ಲಾದೇಶ ತಂಡವು ಆಸ್ಟ್ರೇಲಿಯಾ ವಿರುದ್ಧ 9 ವಿಕೆಟ್‌ಗಳ ಭರ್ಜರಿ ಗೆಲುವು ಸಾಧಿಸಿ ಹೊಸ ಇತಿಹಾಸ ನಿರ್ಮಿಸಿದೆ. ಆಸ್ಟ್ರೇಲಿಯಾ ನೆಲದಲ್ಲಿ ಆತಿಥೇಯ ತಂಡದ ವಿರುದ್ಧ ಬಾಂಗ್ಲಾದೇಶಕ್ಕೆ ಇದು ಚೊಚ್ಚಲ ಟೆಸ್ಟ್ ಗೆಲುವಾಗಿದೆ. ಪೂರ್ಣ ಸಾಮರ್ಥ್ಯದ ತಂಡದೊಂದಿಗೆ ಕಣಕ್ಕಿಳಿದಿದ್ದ ಆಸ್ಟ್ರೇಲಿಯಾ ವಿರುದ್ಧ ಬಾಂಗ್ಲಾದೇಶ ಬ್ಯಾಟಿಂ



ಗ್ ಹಾಗೂ ಬೌಲಿಂಗ್ ಎರಡರಲ್ಲೂ ಅದ್ಭುತ ಪ್ರದರ್ಶನ ನೀಡಿತು.

# ರಾಜೀನಾಮೆಗೆ ಸಿದ್ಧ – ಸಚಿವ ರಾಮಲಿಂಗಾರೆಡ್ಡಿ



ಬೆಂಗಳೂರು : ಚಾಮರಾಜನಗರ ಜಿಲ್ಲೆಯ ಕಾವೇರಿ ವನ್ಯಜೀವಿ ಧಾಮದ ವ್ಯಾಪ್ತಿಯಲ್ಲಿ ನಡೆದ ಎನ್‌ಕೌಂಟರ್ ಪ್ರಕರಣದಲ್ಲಿ ನೈತಿಕ ಹೊಣೆ ಹೊತ್ತು ತಾವು ರಾಜೀನಾಮೆ ನೀಡಬೇಕು ಎಂದು ಬಿಜೆಪಿ ನಾಯಕರು ಭಾವಿಸಿದರೆ ತಾವು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಲು ಸಿದ್ಧ ಎಂದು ಅರಣ್ಯ ಸಚಿವ ರಾಮಲಿಂಗಾರೆಡ್ಡಿ ಹೇಳಿದ್ದಾರೆ. ಪ್ರತಿಪಕ್ಷ ನಾಯಕ ಆರ್. ಅಶೋಕ್ ಈ ಪ್ರಕರಣದ ಕುರಿತು ನ್ಯಾಯಾಂಗ ತನಿಖೆ ನಡೆಸಬೇಕು, ಮೃತರ ಕುಟುಂಬಗಳಿಗೆ ತಲಾ 1 ಕೋಟಿ ರೂ. ಪರಿಹಾರ ಒದಗಿಸಬೇಕು ಹಾಗೂ ರಾಮಲಿಂಗಾರೆಡ್ಡಿ ಅವರು ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಸದನದಲ್ಲಿ ಒತ್ತಾಯಿಸಿದರು.

# 'ವಂದೇ ಮಾತರಂ' ವಿವಾದ: ಪೂರ್ಣ ಗೀತೆ ಹಾಡುವುದಿಲ್ಲ–ಬಿ.ಕೆ. ಹರಿಪ್ರಸಾದ್

ಬೆಂಗಳೂರು : ವಂದೇ ಮಾತರಂ' ಗೀತೆಗೆ ಕಾಂಗ್ರೆಸ್ ಅಧಿನಾಯಕಿ ಸೋನಿಯಾ ಗಾಂಧಿ ಅಪಮಾನ ಮಾಡಿದ್ದಾರೆ ಎಂಬ ಆರೋಪ ಹಾಗೂ ವಿವಾದಕ್ಕೆ ಸಂಬಂಧಿಸಿದಂತೆ ಕೆಪಿಸಿಸಿ ಅಧ್ಯಕ್ಷ ಬಿ.ಕೆ. ಹರಿಪ್ರಸಾದ್ ಪ್ರತಿಕ್ರಿಯಿಸಿದ್ದಾರೆ. ಕಾಂಗ್ರೆಸ್ ಕಾರ್ಯಕ್ರಮಗಳಲ್ಲಿ 'ವಂದೇ ಮಾತರಂ' ಗೀತೆಯನ್ನು ಪೂರ್ಣವಾಗಿ ಹಾಡು



ವುದಿಲ್ಲ, ಕೇವಲ ಎರಡು ಪ್ಯಾರಾಗಳನ್ನಷ್ಟೇ ಹಾಡಲಾಗುವುದು ಎಂದು ಸ್ಪಷ್ಟಪಡಿಸಿದ್ದಾರೆ. ಬಂಕಿಮಚಂದ್ರ ಚಟರ್ಜಿ ಅವರು ರಚಿಸಿರುವ ಈ ಗೀತೆಯ ವಿರುದ್ಧ ಕಾಂಗ್ರೆಸ್‌ಗೆ ಯಾವುದೇ ವಿರೋಧವಿಲ್ಲ. ನೇಣಿಗೆ ಹಾಕಿದರೂ ಅಥವಾ ಜೈಲಿಗೆ ತಳ್ಳಿದರೂ ಈ ನಿಲುವಿಗೆ ಬದ್ಧ ಎಂದಿದ್ದಾರೆ.

# ಹನೂರು ಶೂಟೌಟ್‌ಗೆ ನ್ಯಾಯಾಂಗ ತನಿಖೆ: ಡಿ.ಕೆ. ಶಿವಕುಮಾರ್

ಬೆಂಗಳೂರು : ಸರ್ಕಾರಿ ಜಾಗ ಹಾಗೂ ಮೈದಾನಗಳನ್ನು ಬಳಸಿಕೊಳ್ಳಲು ಪೂರ್ವಾನುಮತಿ ಕಡ್ಡಾಯಗೊಳಿಸುವ ವಿಧೇಯಕದ ವಿಚಾರದಲ್ಲಿ ಆರ್‌ಎಸ್‌ಎಸ್ ನಾಯಕ ಬಿ.ಎಲ್. ಸಂತೋಷ್ ನೀಡಿದ್ದ ಹೇಳಿಕೆಗೆ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಪ್ರತ್ಯುತ್ತರ ನೀಡಿದ್ದಾರೆ. ಯಾರನ್ನೂ ಮನ ನೋಯಿಸಲು ಈ ಕಾನೂನು ತರುತ್ತಿಲ್ಲ, ಕೋರ್ಟ್ ಆದೇಶಗಳನ್ನು ಪಾಲಿಸಿ ಕಾನೂನು ರೂಪಿಸಲಾಗುತ್ತಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ. ಹನೂರು ಶೂಟೌಟ್ ಪ್ರಕರಣಕ್ಕೆ ಸಂಬಂಧಿಸಿದಂತೆ ಈಗಾಗಲೇ ನ್ಯಾಯಾಂಗ ತನಿಖೆಗೆ ಆದೇಶಿಸಲಾಗಿದ್ದು ಮೃತಪಟ್ಟ ಮೂವರಿಗೂ ಪರಿಹಾರ ನೀಡುವ ಕುರಿತು ತೀರ್ಮಾನ ಕೈಗೊಳ್ಳಲಾಗುವುದು ಎಂದರು.



# ಸಚಿವ ಜಮೀರ್ ವಿರುದ್ಧ ಸಂಸದ ಕ್ಯಾ. ಚೌಟ ಆಕ್ರೋಶ

ಮಂಗಳೂರು: ಸ್ವಾತಂತ್ರ್ಯ ದಿನಾಚರಣೆಯಂದು ರಾಷ್ಟ್ರ ಧ್ವಜಾರೋಹಣ ಮಾಡಲು ನಿರಾಕರಿಸಿರುವ ಸಚಿವ ಜಮೀರ್ ಅಹ್ಮದ್ ಖಾನ್ ಅವರ ನಡೆ ಸ್ವಾತಂತ್ರ್ಯ ಹೋರಾಟಗಾರರಿಗೆ, ದೇಶಕ್ಕೆ ಹಾಗೂ ರಾಷ್ಟ್ರಧ್ವಜಕ್ಕೆ ಮಾಡಿರುವ ಬಹುದೊಡ್ಡ ಅಪಮಾನ ಎಂದು ದಕ್ಷಿಣ ಕನ್ನಡ ಸಂಸದ ಹಾಗೂ ಬಿಜೆಪಿ ರಾಜ್ಯ



ಕಾರ್ಯದರ್ಶಿ ಕ್ಯಾ. ಬ್ರಿಜೇಶ್ ಚೌಟ ಖೇದ ವ್ಯಕ್ತಪಡಿಸಿದ್ದಾರೆ. ವಿಜಯನಗರ ಜಿಲ್ಲೆಯಲ್ಲಿ ಸ್ವಾತಂತ್ರ್ಯೋತ್ಸವದಂದು ಧ್ವಜಾರೋಹಣದ ಕರ್ತವ್ಯದಿಂದ ವಿನಾಯಿತಿ ನೀಡುವಂತೆ ಸಮಯದ ಅಭಾವದ ನೆಪವೊಡ್ಡಿ ಮುಖ್ಯಮಂತ್ರಿಯವರಿಗೆ ಅಧಿಕೃತ ಪತ್ರ ಬರೆದಿರುವ ಸಚಿವರ ಮನಸ್ಥಿತಿಯನ್ನು ಸಂಸದರು ಟೀಕಿಸಿದ್ದಾರೆ.

# ಆಂಧ್ರಪ್ರದೇಶಕ್ಕೆ ಹರಿಯುವ ತುಂಗಭದ್ರಾ ನೀರು ತಡೆದ ಬಳ್ಳಾರಿ ರೈತರು



ಬಳ್ಳಾರಿ: ಈ ಬಾರಿಯ ತುಂಗಭದ್ರಾ ನದಿ ನೀರು ಹಂಚಿಕೆ ಪ್ರಕ್ರಿಯೆಗೆ ಸಂಬಂಧಿಸಿದಂತೆ ಆಂಧ್ರಪ್ರದೇಶ ಸರ್ಕಾರವು ಇದುವರೆಗೆ ಅಗತ್ಯ ಸಭೆಯನ್ನು ನಡೆಸದೇ ವಿಳಂಬ ಧೋರಣೆ ಅನುಸರಿಸುತ್ತಿರುವ ಹಿನ್ನೆಲೆಯಲ್ಲಿ ಬಳ್ಳಾರಿ ಜಿಲ್ಲೆಯ ರೈತರು ತೀವ್ರ ಆಕ್ರೋಶ ವ್ಯಕ್ತಪಡಿಸಿದ್ದು, ಆಂಧ್ರಪ್ರದೇಶದತ್ತ ಹರಿಯುತ್ತಿದ್ದ ನೀರನ್ನು ಗಡಿಯಲ್ಲೇ ತಡೆಹಿಡಿದಿದ್ದಾರೆ. ನದಿ ಹರಿವನ್ನು ತಡೆಯುವ ಸಲುವಾಗಿ, ಆಂಧ್ರಪ್ರದೇಶ–ಕರ್ನಾಟಕ ಗಡಿಯಲ್ಲಿರುವ ತುಂಗಭದ್ರಾ ನದಿಯ ಕೆಳಭಾಗದ ಸ್ಲೂಯಿಸ್ ಗೇಟ್ (ನೀರು ಹೊರಹೋಗುವ ದ್ವಾರ) ಬಳಿ ರೈತರು ನೂರಾರು ಮರಳಿನ ಚೀಲಗಳನ್ನು ಜೋಡಿಸಿ ನೀರನ್ನು ತಡೆದಿದ್ದಾರೆ.

# ಸಚಿವ ಕೃಷ್ಣ ಬೈರೇಗೌಡರಿಗೆ ಸಂಸದೀಯ ವ್ಯವಹಾರಗಳ ಹೆಚ್ಚುವರಿ ಖಾತೆ

ಬೆಂಗಳೂರು : ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರ ಅತ್ಯಂತ ಆಪ್ತ ಹಾಗೂ ನಂಬಿಕಸ್ತ ಸಚಿವ ಎಂದೇ ಗುರುತಿಸಿಕೊಂಡಿರುವ ಕೃಷ್ಣ ಬೈರೇಗೌಡ ಅವರಿಗೆ ಸಂಸದೀಯ ವ್ಯವಹಾರಗಳ ಹೆಚ್ಚುವರಿ ಖಾತೆಯನ್ನು ವಹಿಸಿ ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಆದೇಶ ಹೊರಡಿಸಿದ್ದಾರೆ. ಈಗಾಗಲೇ ಗ್ರೇಟರ್



ಬೆಂಗಳೂರು ಪ್ರಾಧಿಕಾರ, ಬಿಡಬ್ಲ್ಯೂಎಸ್‌ಎಸ್‌ಬಿ ಹಾಗೂ ಬಿಎಂಆರ್‌ಸಿಎಲ್ ಜವಾಬ್ದಾರಿಗಳನ್ನು ಸಮರ್ಥವಾಗಿ ನಿಭಾ ಯಿಸುತ್ತಿರುವ ಅವರ ಕಾರ್ಯಕ್ಷಮತೆ, ಬುದ್ಧಿ ವಂತಿಕೆ ಮತ್ತು ಸಂಸದೀಯ ಜ್ಞಾನವನ್ನು ಪರಿಗಣಿಸಿ ಸರ್ಕಾರ ಈ ಹೊಸ ಜವಾಬ್ದಾರಿಯನ್ನು ಹಸ್ತಾಂತರಿಸಿದೆ.

# ವಂದೇ ಮಾತರಂ ವಿವಾದ: ಅಮಿತ್ ಶಾ ತೀವ್ರ ವಾಗ್ದಾಳಿ

ನವದೆಹಲಿ : ದೆಹಲಿಯ ಕಾಂಗ್ರೆಸ್ ಪ್ರಧಾನ ಕಚೇರಿಯಲ್ಲಿ ನಡೆದ ಸ್ವಾತಂತ್ರ್ಯ ದಿನಾಚರಣೆ ಕಾರ್ಯಕ್ರಮದಲ್ಲಿ 'ವಂದೇ ಮಾತರಂ' ಗೀತೆ ಹಾಡುತ್ತಿದ್ದಾಗ ಅದನ್ನು ಅರ್ಧಕ್ಕೇ ನಿಲ್ಲಿಸುವಂತೆ ಸೋನಿಯಾ ಗಾಂಧಿ ಸೂಚಿಸಿದ್ದಾರೆ ಎಂಬ ಆರೋಪ ದೊಡ್ಡ ರಾಜಕೀಯ ವಿವಾದಕ್ಕೆ ಕಾರಣವಾಗಿದೆ. ಈ ಕುರಿತು ರಾಜಸ್ಥಾನದ ಚಿತ್ತೋರ್‌ಗಢದಲ್ಲಿ ನಡೆದ ಸಾರ್ವಜನಿಕ ಸಭೆಯಲ್ಲಿ ತೀವ್ರವಾಗಿ ಪ್ರತಿಕ್ರಿಯಿಸಿದ ಕೇಂದ್ರ ಗೃಹ ಸಚಿವ ಅಮಿತ್ ಶಾ, ವಂದೇ ಮಾತರಂ ಗೀತೆಯನ್ನು ಮಧ್ಯದಲ್ಲೇ ನಿಲ್ಲಿಸುವಂತೆ ಸೂಚಿಸಿ ಸೋನಿಯಾ ಗಾಂಧಿ ದೊಡ್ಡ ಪಾಪ ಎಸಗಿದ್ದಾರೆ ಎಂದು ಕಿಡಿಕಾರಿದ್ದಾರೆ.



# ಸ್ವಾತಂತ್ರ್ಯವೆಂದರೆ ಸಾಂವಿಧಾನಿಕ ಸಮಾನತೆ ಮತ್ತು ನ್ಯಾಯ: ಖರ್ಗೆ

ನವದೆಹಲಿ: ದೇಶದ 80ನೇ ಸ್ವಾತಂತ್ರ್ಯ ದಿನಾಚರಣೆಯ ಶುಭ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಸಮಸ್ತ ದೇಶವಾಸಿಗಳಿಗೆ ಶುಭಾಶಯ ಕೋರಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ 'ಎಕ್ಸ್'ನಲ್ಲಿ ಪೋಸ್ಟ್ ಮಾಡಿರುವ ಅವರು, ಭಾರತದ ಸ್ವಾತಂತ್ರ್ಯ ಸಂಗ್ರಾಮದಲ್ಲಿ



ಸರ್ವಸ್ವವನ್ನೂ ತ್ಯಾಗ ಮಾಡಿದ ಅಸಂಖ್ಯಾತ ಹೋರಾಟಗಾರರಿಗೆ ವಿನಮ್ರ ಪ್ರಣಾಮಗಳನ್ನು ಸಲ್ಲಿಸಿದ್ದಾರೆ. ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಮಹನೀಯರ ಧೈರ್ಯ, ಅಪ್ರತಿಮ ತ್ಯಾಗ ಹಾಗೂ ರಾಷ್ಟ್ರದ ಮೇಲಿನ ಅಚಲ ನಂಬಿಕೆ ಎಂದೆಂದಿಗೂ ಸ್ಫೂರ್ತಿದಾಯಕ ಎಂದು ಸ್ಮರಿಸಿದ್ದಾರೆ.

# 'ಸಂಸತ್ ಚಲೋ' ಮೆರವಣಿಗೆ ಅಕ್ರಮ : ದೆಹಲಿ ಪೊಲೀಸ್ ಅಫಿಡವಿಟ್



ನವದೆಹಲಿ : ಜುಲೈ 20ರಂದು ದೆಹಲಿಯ ಜಂತರ್ ಮಂತರ್‌ನಿಂದ ಸಂಸತ್ತಿನತ್ತ ನಡೆದ ವಿದ್ಯಾರ್ಥಿಗಳ 'ಸಂಸತ್ ಚಲೋ' ಮೆರವಣಿಗೆಗೆ ಯಾವುದೇ ಅನುಮತಿ ನೀಡಿರಲಿಲ್ಲ ಹಾಗೂ ಬ್ಯಾರಿಕೇಡ್‌ಗಳನ್ನು ದಾಟಿ ಮುನ್ನುಗ್ಗಲು ನಡೆಸಿದ ಯತ್ನ ಕಾನೂನುಬಾಹಿರವಾಗಿತ್ತು ಎಂದು ದೆಹಲಿ ಪೊಲೀಸರು ಸುಪ್ರೀಂ ಕೋರ್ಟ್‌ಗೆ ಸಲ್ಲಿಸಿರುವ ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ. ಪ್ರತಿಭಟನೆ ವೇಳೆ ಅತಿಯಾದ ಬಲಪ್ರಯೋಗ ಹಾಗೂ ಲಾಠಿಚಾರ್ಜ್ ನಡೆಸಲಾಗಿದೆ ಎಂಬ ಆರೋಪಗಳನ್ನು ತಳ್ಳಿಹಾಕಿರುವ ಪೊಲೀಸರು, ಪರಿಸ್ಥಿತಿಯನ್ನು ನಿಯಂತ್ರಣಕ್ಕೆ ತರಲು ಪ್ರಮಾಣಾನುಗುಣ ಬಲಪ್ರಯೋಗ ಮಾತ್ರ ಮಾಡಲಾಗಿದೆ ಎಂದು ವಾದಿಸಿದ್ದಾರೆ.

# ದಿಮಾಗಿ ನಕ್ಸಲರನ್ನು ಮೂಲೆಗುಂಪು ಮಾಡಿ: ಪ್ರಧಾನಿ ಮೋದಿ

ನವದೆಹಲಿ: ಭಾರತವು ಸಶಸ್ತ್ರ ನಕ್ಸಲಿಸಂ ಮತ್ತು ಮಾವೋವಾದಿ ಹಿಂಸೆಯನ್ನು ಯಶಸ್ವಿಯಾಗಿ ನಿರ್ಮೂಲನೆ ಮಾಡಿದೆ. ಆದರೆ, ಸಮಾಜದಲ್ಲಿ ಅಶಾಂತಿ ಸೃಷ್ಟಿಸಲು ಯತ್ನಿಸುತ್ತಿರುವ 'ದಿಮಾಗಿ ನಕ್ಸಲರನ್ನು' ಪತ್ತೆಹಚ್ಚಿ ಪ್ರತ್ಯೇಕಿಸುವ ಅಗತ್ಯವಿದೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ಎಚ್ಚರಿಕೆ ನೀಡಿದ್ದಾರೆ. ದೆಹಲಿಯ ಐತಿಹಾಸಿಕ



ಕೆಂಪುಕೋಟೆಯ ಮೇಲೆ 80ನೇ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಹಣ ನೆರವೇರಿಸಿ ದೇಶವನ್ನು ಉದ್ದೇಶಿಸಿ ಮಾತನಾಡಿದ ಅವರು, ಸಶಸ್ತ್ರ ನಕ್ಸಲಿಸಂ ನಿರ್ಮೂಲನೆಯಾಗಿದ್ದರೂ ಅವರ ವಿಚಾರಧಾರೆ ಇಂದಿಗೂ ಸಮಾಜದಲ್ಲಿ ಉಳಿದುಕೊಂಡಿದೆ ಎಂದು ಆತಂಕ ವ್ಯಕ್ತಪಡಿಸಿದ್ದಾಗಿ ಮೂಲಗಳಿಂದ ತಿಳಿದುಬಂದಿದೆ.

# ಹೊಸ ಕಂಪನಿಗಳ ನೋಂದಣಿಯಲ್ಲಿ ಕರ್ನಾಟಕ್ಕೆ 4ನೇ ಸ್ಥಾನ!

ಮುಂಬೈ: 2025–26ನೇ ಹಣಕಾಸು ವರ್ಷದಲ್ಲಿ ಹೊಸ ಕಂಪನಿಗಳ ನೋಂದಣಿಯಲ್ಲಿ ಮಹಾರಾಷ್ಟ್ರವು ದೇಶದಲ್ಲೇ ಮೊದಲ ಸ್ಥಾನದಲ್ಲಿದ್ದು ಕರ್ನಾಟಕ ನಾಲ್ಕನೇ ಸ್ಥಾನ ಪಡೆದುಕೊಂಡಿದೆ ಎಂದು ಮಹಾರಾಷ್ಟ್ರ ಮುಖ್ಯಮಂತ್ರಿ ದೇವೇಂದ್ರ ಫಡ್ನವೀಸ್ ತಿಳಿಸಿದ್ದಾರೆ. 2025–26ನೇ ಸಾಲಿನಲ್ಲಿ ಮಹಾರಾಷ್ಟ್ರದಲ್ಲಿ ಅತಿ ಹೆಚ್ಚು ಅಂದರೆ 41,525 ಹೊಸ ಕಂಪನಿಗಳು ನೋಂದಣಿಯಾಗಿವೆ. ಉತ್ತರಪ್ರದೇಶ (27,494) ಮತ್ತು ದೆಹಲಿ (20,272) ಕ್ರಮವಾಗಿ 2 ಮತ್ತು 3ನೇ ಸ್ಥಾನಗಳಲ್ಲಿದ್ದರೆ, ಕರ್ನಾಟಕದಲ್ಲಿ 17,857 ಕಂಪನಿಗಳು ನೋಂದಣಿಯಾಗುವ ಮೂಲಕ 4ನೇ ಸ್ಥಾನದಲ್ಲಿದೆ.



# ಅಲ್ಪಸಂಖ್ಯಾತರ ಕುರಿತು ಸಿಎಂ ರೇವಂತ್ ರೆಡ್ಡಿ ಹೇಳಿಕೆ ಚರ್ಚೆಗೆ ಗ್ರಾಸ

ಹೈದರಾಬಾದ್ : ಹೈದರಾಬಾದ್‌ನ ಬಂಜಾರ ಹಿಲ್ಸ್‌ನ ಆದಿವಾಸಿ ಭವನದಲ್ಲಿ ನಡೆದ ಅಲ್ಪಸಂಖ್ಯಾತರ ಶ್ರೇಷ್ಠತಾ ಸಮಾವೇಶದಲ್ಲಿ ಮಾತನಾಡಿದ ತೆಲಂಗಾಣ ಮುಖ್ಯಮಂತ್ರಿ ಎ. ರೇವಂತ್



ರೆಡ್ಡಿ ಅವರ ಹೇಳಿಕೆಯು ರಾಜ್ಯ ರಾಜಕಾರಣದಲ್ಲಿ ತೀವ್ರ ಚರ್ಚೆಗೆ ಗ್ರಾಸವಾಗಿದೆ. ಅಲ್ಪಸಂಖ್ಯಾತ ಸಮುದಾಯದ ವಿದ್ಯಾರ್ಥಿಗಳು ಕುಶಲ ಕಾರ್ಮಿಕರಾಗಿದ್ದಾರೆ.

ಕರಾವಳಿ ತರಂಗಿಣಿ

# ಕಲಾ ತರಂಗಿಣಿ

## ಮೊದಲ ಹಾಡಿನಲ್ಲೇ ಗಮನ ಸೆಳೆದ 'ನೀ ನಂಗೆ ಅಲ್ಲವಾ'

ಸುರಮ್ ಮೂವೀಸ್ ಲಾಂಛನದಲ್ಲಿ ಜಯರಾಮ ದೇವಸಮುದ್ರ ನಿರ್ಮಿಸಿರುವ, ಮನೋಜ್ ಪಿ ನಡಲುಮನೆ ನಿರ್ದೇಶನದ ಹಾಗೂ ರಾಹುಲ್ ಅರ್ಕಟ್, ಕಾಶಿಮಾ ನಾಯಕ-ನಾಯಕಿಯಾಗಿ ನಟಿಸಿರುವ 'ನೀ ನಂಗೆ ಅಲ್ಲವಾ' ಚಿತ್ರದ ಮೊದಲ ಹಾಡು "ನೋ ನೋ" ಇತ್ತೀಚಿಗೆ ಬಿಡುಗಡೆಯಾಯಿತು. ಸೂರಜ್ ಜೋಯಿಸ್ ಸಂಗೀತ ಸಂಯೋಜಿರುವ ಈ ಹಾಡನ್ನು ನಿರ್ದೇಶಕ ಮನೋಜ್ ಪಿ ನಡಲುಮನೆ ಅವರೆ ಬರೆದು, ಹಾಡಿರುವುದು ವಿಶೇಷ. ಖ್ಯಾತ ನಟಿಯರಾದ ಸಂಜನಾ ಆನಂದ್ ಹಾಗೂ ರಾಶಿಕಾ ಈ ಹಾಡನ್ನು ಬಿಡುಗಡೆ ಮಾಡಿ ಚಿತ್ರ ಯಶಸ್ವಿಯಾಗಲೆಂದು ಹಾರೈಸಿದರು. ಸಂಗಮ ಯೂಟ್ಯೂಬ್ ಚಾನಲ್ ಮೂಲಕ ಈ ಹಾಡು ಬಿಡುಗಡೆಯಾಗಿದ್ದು, ಅಧಿಕ ಸಂಖ್ಯೆಯಲ್ಲಿ ವೀಕ್ಷಣೆಯಾಗುವುದರ ಜೊತೆಗೆ ಅಪಾರ ಮೆಚ್ಚುಗೆ ಕೂಡ ವ್ಯಕ್ತವಾಗುತ್ತಿದೆ. ಹಾಡು ಬಿಡುಗಡೆ ನಂತರ ಚಿತ್ರತಂಡದ ಸದಸ್ಯರು ಮಾತನಾಡಿದರು. ನನ್ನ ಮೊದಲ ನಿರ್ದೇಶನದ 'ಅನ' ಚಿತ್ರದಿಂದಲೂ ತಾವು ನೀಡುತ್ತಿರುವ ಪ್ರೋತ್ಸಾಹಕ್ಕೆ ಚಿರ ಋಣಿ. ಇಂದು ನನ್ನ ನಿರ್ದೇಶನದ 'ನೀ ನಂಗೆ ಅಲ್ಲವಾ' ಚಿತ್ರದ ಮೊದಲ ಹಾಡು ಬಿಡುಗಡೆಯಾಗಿದೆ. ಇದನ್ನು ಒನ್ ಸೈಡ್ ಲವ್ ಸಾಂಗ್ ಎನ್ನಬಹುದು. ನಾಯಕಿಯ ಪ್ರೀತಿಗೆ ಕಾಯುತ್ತಿರುವ ಪ್ರೇಮಿ ತನ್ನ ಪ್ರೇಮವನ್ನು ಈ ಹಾಡಿನ ಮೂಲಕ ವ್ಯಕ್ತ ಪಡಿಸುತ್ತಾನೆ. ನಾನೇ ಈ ಹಾಡನ್ನು ಬರೆದಿದ್ದೇನೆ. ಹಾಡಿದ್ದೇನೆ ಕೂಡ. ಸೂರಜ್ ಜೋಯಿಸ್ ಅವರ ಸಂಗೀತ ನಿರ್ದೇಶನ ಹಾಡಿನ ತೂಕವನ್ನು ಮತ್ತಷ್ಟು ಹೆಚ್ಚಿಸಿದೆ. ಅಭಿಷೇಕ್ ಮಾಸ್ಟರ್ ನೃತ್ಯ ನಿರ್ದೇಶನ ಮಾಡಿದ್ದಾರೆ. ಈ ಸಂದರ್ಭದಲ್ಲಿ ನಾನು ನನ್ನ ಇಡೀ ತಂಡಕ್ಕೆ ನಿರ್ಮಾಪಕರಿಗೆ ಹಾಗೂ ವಿಶೇಷವಾಗಿ ಅತಿಥಿಗಳಾಗಿ ಆಗಮಿಸಿರುವ ಸಂಜನಾ ಆನಂದ್, ರಶಿಕಾ ಅವರಿಗೆ ಧನ್ಯವಾದ ತಿಳಿಸುತ್ತೇನೆ ಎಂದರು ನಿರ್ದೇಶಕ ಮನೋಜ್ ಪಿ ನಡಲುಮನೆ. ಈ ತಂಡದ ಜೊತೆಗೆ ಸಿನಿಮಾ ಮಾಡಿದ್ದು ಬಹಳ ಸಂತೋಷವಾಗಿದೆ. ನಾನು ಬಂಡವಾಳ ಹಾಕಿದ್ದು ಬಿಟ್ಟರೆ ಬೇರೆ ಎಲ್ಲಾ ಕೆಲಸವನ್ನು ನನ್ನ ತಂಡವೇ ಮಾಡಿದೆ. ಇನ್ನೂ, ಬಿಡುಗಡೆಯಾಗಿರುವ ನಮ್ಮ ಚಿತ್ರದ ಮೊದಲ ಹಾಡು ಸೂಪರ್ ಹಿಟ್ ಆಗಲಿದೆ. ಈ ಚಿತ್ರದ ಪ್ರತಿಯೊಂದು ಹಾಡು ಚೆನ್ನಾಗಿದೆ. ಯಾವ ಹಾಡನ್ನು ಮೊದಲು ರಿಲೀಸ್ ಮಾಡಬೇಕೆಂದು ನಮ್ಮಲ್ಲೇ ಪೈಪೋಟಿ ಆಯಿತು. ಒಳ್ಳೆಯ ಹಾಡುಗಳನ್ನು ಕೊಟ್ಟಿರುವ ಸಂಗೀತ ನಿರ್ದೇಶಕ ಸೂರಜ್ ಹಾಗೂ ತಂಡಕ್ಕೆ ಧನ್ಯವಾದ ಎಂದರು.



## ಕನ್ನಡದಲ್ಲಿ ಹಿರಿಯ ಮತ್ತು ಖ್ಯಾತ ಚಲನಚಿತ್ರ ನಿರ್ದೇಶಕರಾದ ದಿನೇಶ್ ಬಾಬು ಅವರಿಂದ ಧ್ವಜಾರೋಹಣ

ಭಾರತೀಯ ಚಿತ್ರರಂಗದ ದಿಗ್ಗಜರುಗಳಾದ ಪುಟ್ಟಣ್ಣ ಕಣಗಾಲರು, ಸಿದ್ದಲಿಂಗಯ್ಯನವರು, ಲಕ್ಷ್ಮೀನಾರಾಯಣರು, ಕೆ.ಎಸ್.ಎಲ್. ಸ್ವಾಮಿಯವರು, ರಾಜೇಂದ್ರ ಸಿಂಗ್ ಬಾಬು ಅವರು ಮುಂತಾದ ಅಗ್ರಗಣ್ಯರು ಸೇರಿ 1984ರಲ್ಲಿ ಕರ್ನಾಟಕದ ಚಲನಚಿತ್ರ ನಿರ್ದೇಶಕರ ಒಳಿತಿಗಾಗಿ ಸ್ಥಾಪಿಸಿದ ಸಂಸ್ಥೆ ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ (ಕಾನ್ನಿಡ). 42 ವರ್ಷಗಳಿಂದ ನಡೆದುಕೊಂಡು ಬರುತ್ತಿರುವ ಈ ಸಂಸ್ಥೆಯಿಂದ ಬಹಳ ಅಚ್ಚುಕಟ್ಟಾಗಿ ಆಗಸ್ಟ್ 15 ರಂದು ಬೆಳಿಗ್ಗೆ 8 ಗಂಟೆಗೆ ಗಾಂಧಿನಗರದಲ್ಲಿರುವ ಸಂಘದ ಕಚೇರಿ ಮುಂಭಾಗದಲ್ಲಿ ಸಂಘದ ಅಧ್ಯಕ್ಷರಾದ ಎನ್ನಾರ್ ಕೆ ವಿಶ್ವನಾಥ್ ಅವರ ನೇತೃತ್ವದಲ್ಲಿ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಯಿತು. ಹಿರಿಯ ಮತ್ತು ಖ್ಯಾತ ಚಲನಚಿತ್ರ ನಿರ್ದೇಶಕರಾದ ದಿನೇಶ್‌ಬಾಬು ಅವರು ಧ್ವಜಾರೋಹಣ ಮಾಡಿ ಚಿತ್ರರಂಗದ ಸಮಸ್ತರಿಗೂ ಸ್ವಾತಂತ್ರ್ಯದ ಶುಭಾಶಯಗಳನ್ನು ತಿಳಿಸಿದರು. ಈ ಸಂದರ್ಭದಲ್ಲಿ ಸಂಘದ ಪದಾಧಿಕಾರಿಗಳು, ಕಾರ್ಯಕಾರಿ ಸಮಿತಿ ಸದಸ್ಯರು, ಉಪಸಮಿತಿ ಸದಸ್ಯರುಗಳು ಮತ್ತು ಸಂಘದ ಇತರ ಸದಸ್ಯರು ಪಾಲ್ಗೊಂಡಿದ್ದರು. ಧ್ವಜಾರೋಹಣದ ನಂತರ ಹಿರಿಯ ಮತ್ತು ಖ್ಯಾತ ಚಲನಚಿತ್ರ ನಿರ್ದೇಶಕರಾದ ಶ್ರೀ ದಿನೇಶ್ ಬಾಬು ಅವರನ್ನು ಸಂಘದ ಕಚೇರಿಯಲ್ಲಿ ಸದಸ್ಯರ ಸಮ್ಮುಖದಲ್ಲಿ ಗೌರವಿಸಲಾಯಿತು.




## ನವೆಂಬರ್ 6ಕ್ಕೆ 'ರಾಜನಿವಾಸ' ತೆರೆಗೆ

ಕೆನೋಪಸ್ ಸಿನಿಮಾಸ್ ಪ್ರೊಡಕ್ಷನ್ ಹಾಗೂ ತಂಬೂರಿ ಫಿಲಂಸ್ ಅರ್ಪಿಸಿರುವ ಡಿ.ಪಿ.ಆಂಜನಪ್ಪ ಅವರು ನಿರ್ಮಿಸಿರುವ ಹಾಗೂ ಲೋಕೇಶ್ ಗೌಡ ಅವರ ಸಹ ನಿರ್ಮಾಣವಿರುವ 'ರಾಜನಿವಾಸ' ಚಿತ್ರ ನವೆಂಬರ್ 6ರಂದು ತೆರೆಕಾಣಲಿದೆ. ಈ ಚಿತ್ರದ ಬಿಡುಗಡೆ ದಿನಾಂಕವನ್ನು ಕರ್ನಾಟಕ ರಕ್ಷಣಾ ವೇದಿಕೆಯ ರಾಜ್ಯಾಧ್ಯಕ್ಷರಾದ ನಾರಾಯಣಗೌಡ ಅವರು ಪ್ರಕಟಿಸಿದರು. ಮಿಥುನ್ ಸುವರ್ಣ ಅವರ ನಿರ್ದೇಶನದ ರಾಜನಿವಾಸ ಚಿತ್ರದಲ್ಲಿ ರಾಘವ್ ನಾಯಕ್, ಕೃತಿಕಾ ರವೀಂದ್ರ ಪ್ರಮುಖ ಪಾತ್ರಗಳಲ್ಲಿ ಹಾಗೂ ಶ್ರೀನಗರ ಕಿಟ್ಟಿ ವಿಶೇಷ ಪಾತ್ರದಲ್ಲಿ ನಟಿಸಿದ್ದಾರೆ. ಈವೇಳೆ ಕರವೇ ರಾಜ್ಯ ಮಹಿಳಾ ಘಟಕದ ಅಶ್ವಿನಿಗೌಡ ಕೂಡ ಉಪಸ್ಥಿತರಿದ್ದರು. ಈ ಸಂದರ್ಭದಲ್ಲಿ ನಿರ್ದೇಶಕ ಮಿಥುನ್ ಸುವರ್ಣ ಮಾತನಾಡುತ್ತ ನಮ್ಮ ಸಿನಿಮಾ ನ.6ರಂದು ತೆರೆ ಕಾಣುತ್ತಿದೆ ಅದೇದಿನ ರಾಮಾಯಣ ಕೂಡ ಬರುತ್ತಿದೆ ಅಂತ ತಿಳಿಯಿತು. ನಮ್ಮ ಚಿತ್ರದ ಕಂಟೆಂಟ್ ಚೆನ್ನಾಗಿದೆ. ಜನ ಬರ್ತಾರೆ ನಿಂತೇ ನಿಲ್ಲುತ್ತೆ ಅಂತ ನಮಗೆ ಸಂಪೂರ್ಣ ಭರವಸೆಯಿದೆ. ಇತ್ತೀಚೆಗೆ ಕೆಲವರು ಥೇಟರಿಗೆ ಜನ ಬರ್ತಿಲ್ಲ ಅಂತ ಬೇಸರದಿಂದ ಹೇಳಿ ಕೊಳ್ಳುತ್ತಿದ್ದಾರೆ. ಇದನ್ನು ನಾನು ಒಪ್ಪಲ್ಲ. ಒಳ್ಳೆ ಚಿತ್ರಗಳನ್ನು ಪ್ರೇಕ್ಷಕರು ಯಾವತ್ತೂ ಗೆಲ್ಲಿಸುತ್ತಲೇ ಬಂದಿದ್ದಾರೆ. ಕನ್ನಡ ಸೇರಿದಂತೆ ದಕ್ಷಿಣದ ನಾಲ್ಕು ಭಾಷೆಗಳಲ್ಲಿ ರಾಜನಿವಾಸ ಬಿಡುಗಡೆಯಾಗಲಿದೆ. ನಮ್ಮ ಚಿತ್ರದ ಕಂಟೆಂಟ್, ಮೌತ್ ಪಬ್ಲಿಸಿಟಿಯಿಂದ ಗೆಲ್ಲುತ್ತೆ ಅಂತ ನಿರ್ಮಾಪಕರಿಗೆ ಹೇಳಿದ್ದೇನೆ ಎಂದರು. ವೇದಿಕೆಯಲ್ಲಿ ನಾರಾಯಣಗೌಡ್ರು ಮಾತನಾಡುತ್ತ ರಾಜ್ಯೋತ್ಸವದ ದಿನಗಳಲ್ಲಿ ನಮ್ಮ ಚಿತ್ರ ಬಿಡುಗಡೆಯಾಗುತ್ತಿದೆ. ಕಥೆ ನಿರೂಪಣೆ ಚೆನ್ನಾಗಿದ್ರೆ ಜನ ಖಂಡಿತ ಬರ್ತಾರೆ ಅಂತ ಹೇಳಿದ್ದಾರೆ.




## 90ರ ದಶಕದ ಫ್ಯಾಮಿಲಿ ಡ್ರಾಮಾದಲ್ಲಿ 'ಟಗರು ಪಲ್ಯ' ಹೀರೋ

ಸ್ಯಾಂಡಲ್‌ವುಡ್‌ನ ಪ್ರತಿಭಾವಂತ ನಟ, 'ಟಗರು ಪಲ್ಯ' ಖ್ಯಾತಿಯ ನಾಗಭೂಷಣ್ ಅವರ ಜನ್ಮದಿನದ ಪ್ರಯುಕ್ತ ಅವರ ಹೊಸ ಚಿತ್ರದ ಅಧಿಕೃತ ಘೋಷಣೆಯಾಗಿದೆ. ಕಸ್ತೂರಿ ಟಾಕೀಸ್ ಬ್ಯಾನರ್‌ನಡಿ ನಿರ್ಮಾಪಕ ಎಸ್. ಕೆ. ಸಂತೋಷ್ ಅವರು ನಿರ್ಮಿಸುತ್ತಿರುವ, 'ಪ್ರೊಡಕ್ಷನ್ ನಂ.2' ಎಂದು ತಾತ್ಕಾಲಿಕವಾಗಿ ಹೆಸರಿಡಲಾಗಿರುವ ಈ ಚಿತ್ರವನ್ನು ಜಗದೀಶ್ ಎನ್. ಕೋಲಾರ ನಿರ್ದೇಶಿಸುತ್ತಿದ್ದಾರೆ. ಇಂದು (ಆಗಸ್ಟ್ 17) ನಟ ನಾಗಭೂಷಣ್ ಅವರ ಹುಟ್ಟುಹಬ್ಬದ ಸಂಭ್ರಮದಲ್ಲಿದ್ದು, ಈ ವಿಶೇಷ ದಿನದಂದೇ ಚಿತ್ರತಂಡ ಹೊಸ ಸಿನಿಮಾದ ವಿವರಗಳನ್ನು ಹಂಚಿಕೊಳ್ಳುವ ಮೂಲಕ ಅಭಿಮಾನಿಗಳಿಗೆ ಸಿಹಿ ಸುದ್ದಿ ನೀಡಿದೆ. ಚಿತ್ರದ ಕುರಿತು ಮಾಹಿತಿ ಹಂಚಿಕೊಂಡಿರುವ ನಿರ್ದೇಶಕ ಜಗದೀಶ್ ಎನ್. ಕೋಲಾರ, ಇದೊಂದು 90ರ ದಶಕದ ಹಿನ್ನೆಲೆಯಲ್ಲಿ ಸಾಗುವ ಅಪ್ಪಟ ಕೌಟುಂಬಿಕ ಕಥಾಹಂದರ ಎಂದು ತಿಳಿಸಿದ್ದಾರೆ. ನಾಗಭೂಷಣ್ ಅವರು ಈ ಹಿಂದೆಂದೂ ಇಂಥ ವಿಭಿನ್ನ ಪಾತ್ರ ಹಾಗೂ ಕಾಲಘಟ್ಟದ ಕಥೆಯಲ್ಲಿ ಕಾಣಿಸಿಕೊಂಡಿರಲಿಲ್ಲ. ಸದ್ಯ ಚಿತ್ರದ ಚಿತ್ರಕಥೆಯ ಅಂತಿಮ ಹಂತದ ಸಿದ್ಧತೆಗಳು ಭರದಿಂದ ಸಾಗುತ್ತಿದ್ದು, ನಾಗಭೂಷಣ್ ಅವರು ಕಥೆ ಕೇಳಿದ ತಕ್ಷಣವೇ ಮೆಚ್ಚಿ ಒಪ್ಪಿಕೊಂಡಿದ್ದಾರೆ. ತಮ್ಮ ವೃತ್ತಿಜೀವನದಲ್ಲೇ ಇದೊಂದು ಅತ್ಯುತ್ತಮ ಸಿನಿಮಾವಾಗಲಿದೆ ಎಂಬ ಭರವಸೆಯನ್ನೂ ನಟ ವ್ಯಕ್ತಪಡಿಸಿದ್ದಾರೆ.



## 'ಫೌಜಿ'ಯಾಗಿ ಅಖಾಡಕ್ಕಿಳಿದ ರೆಬೆಲ್‌ಸ್ಟಾರ್ ಪ್ರಭಾಸ್

ಬಾಕ್ಸ್ ಆಫೀಸ್ ಕಿಂಗ್, ಪ್ಯಾನ್ ಇಂಡಿಯಾ ಸ್ಟಾರ್ ಪ್ರಭಾಸ್ ಅಂದ್ರೇನೇ ಸಿಲ್ವರ್ ಸ್ಕ್ರೀನ್ ಮೇಲೆ ಸುನಾಮಿ. ಕಳೆದ 7 ವರ್ಷಗಳಿಂದ ಡಿಜಿಟಲ್ ಲೋಕದಲ್ಲಿ ತಮ್ಮ ಸಾಮ್ರಾಜ್ಯದ ಮುದ್ರೆಯಂತಿದ್ದ 'ಬಾಹುಬಲಿ'ಯ ಐಕಾನಿಕ್ ಪ್ರೊಫೈಲ್ ಪಿಕ್ಚರ್ ಅನ್ನು ಅಂತಿಮವಾಗಿ ಬದಲಾಯಿಸುವ ಮೂಲಕ ಪ್ರಭಾಸ್ ಹೊಸ ಇತಿಹಾಸಕ್ಕೆ ನಾಂದಿ ಹಾಡಿದ್ದಾರೆ! ಮುಂಬರುವ ಬಹುನಿರೀಕ್ಷಿತ 'ಫೌಜಿ' ಚಿತ್ರದ ರಗಡ್ ಮತ್ತು ಪವರ್‌ಫುಲ್ ಹೊಸ ಲುಕ್‌ನೊಂದಿಗೆ ತಮ್ಮ ಸೋಶಿಯಲ್ ಮೀಡಿಯಾ ಅಕೌಂಟ್‌ಗಳನ್ನು ರಿಫ್ರೆಶ್ ಮಾಡಿದ್ದು, ಕ್ಷಣಮಾತ್ರದಲ್ಲಿ ಇಂಟರ್ನೆಟ್ ಜಗತ್ತಿನಲ್ಲಿ ಬಿರುಗಾಳಿ ಎದ್ದಿದೆ. ಅದರಲ್ಲೂ ಸ್ವಾತಂತ್ರ್ಯ ಮಾಸದ ಆರಂಭದಲ್ಲೇ ಈ ಬಿಗ್ ಅಪ್‌ಡೇಟ್ ಹೊರಬಂದಿರುವುದು ಸಿನಿಪ್ರಿಯರ ರೋಮಾಂಚನವನ್ನು ಡಬಲ್ ಮಾಡಿದೆ. 'ಫೌಜಿ' ಚಿತ್ರದ ದೇಶಭಕ್ತಿಯ ಹಿನ್ನೆಲೆಗೆ ಈ ಲುಕ್ ಅಚ್ಚುಕಟ್ಟಾಗಿ ಕನೆಕ್ಟ್ ಆಗಿದ್ದು, ಇದು ಪ್ರೊಫೈಲ್ ಬದಲಾವಣೆ ಅಲ್ಲ. ಬಾಹುಬಲಿ ಯುಗದ ನಂತರ ಮತ್ತೊಂದು ಬ್ರಹ್ಮಾಂಡ ಯಶಸ್ಸಿನ ಮೈಲಿಗಲ್ಲು ಆರಂಭವಾಗುವುದರ ಸ್ಪಷ್ಟ ಮುನ್ಸೂಚನೆ ಎಂದು ಕೋಟ್ಯಂತರ ಅಭಿಮಾನಿಗಳು ಕೊಂಡಾಡುತ್ತಿದ್ದಾರೆ.



## ಗ್ಲಾಮರ್ ಗೂ ಸೈ..., ಆಕ್ಷನ್‌ಗೂ ಜೈ... ಪಾವನಾ ಹೊಸ ಲುಕ್

ಕನ್ನಡ ಚಿತ್ರರಂಗದಲ್ಲಿ ಇಲ್ಲಿಯವರೆಗೆ ಗ್ಲಾಮರಸ್ ಮತ್ತು ಟ್ರೆಡೀಷನಲ್ ಪಾತ್ರಗಳಲ್ಲಿ ಹೆಚ್ಚಾಗಿ ಮಿಂಚಿದ್ದ ನಟಿ ಪಾವನಾ ಗೌಡ, ಇದೀಗ ರಗಡ್ ಪಾತ್ರದ ಮೂಲಕ ಪ್ರೇಕ್ಷಕರ ಮುಂದೆ ಬರುವ ತಯಾರಿಯಲ್ಲಿದ್ದಾರೆ. ಹೌದು, ಆರಂಭದಿಂದ ಇಲ್ಲಿಯವರೆಗೂ ಹೆಚ್ಚಾಗಿ ಸೌಂದರ್ಯ ಮತ್ತು ಸೌಮ್ಯ ಸ್ವಭಾವದ ಹುಡುಗಿಯ ಪಾತ್ರಗಳಲ್ಲೇ ಹೆಚ್ಚಾಗಿ ಕಾಣಿಸಿಕೊಂಡು ಗಮನ ಸೆಳೆದಿದ್ದ ಪಾವನಾ ಗೌಡ ಈಗ ಉತ್ತರ ಕರ್ನಾಟಕದ ಖಡಕ್ ಪೊಲೀಸ್ ಅಧಿಕಾರಿಯ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ. ಅಂದಹಾಗೆ, ನಟಿ ಪಾವನಾ ಗೌಡ ಇದೇ ಮೊದಲ ಬಾರಿಗೆ ಇಂಥದ್ದೊಂದು ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿರುವುದು 'ಡಿಯರ್ ಹಸ್ಬೆಂಡ್' ಚಿತ್ರದಲ್ಲಿ. 'ಜಿ9 ಕಮ್ಯುನಿಕೇಶನ್ ಆಂಡ್ ಮೀಡಿಯಾ' ಸಂಸ್ಥೆಯ ಅಡಿಯಲ್ಲಿ ನಿರ್ಮಾಣವಾಗುತ್ತಿರುವ, ಗುರುರಾಜ ಕುಲಕರ್ಣಿ (ನಾಡಗೌಡ) ನಿರ್ದೇಶನದ 'ಡಿಯರ್ ಹಸ್ಬೆಂಡ್' ಚಿತ್ರದ ತೆರೆ ಹಿಂದಿನ ಕೆಲಸಗಳು ಭರದಿಂದ ನಡೆಯುತ್ತಿದೆ.



## ಹೊಸ ತಲೆಮಾರಿನ ಸಿನಿಮಾ ನಿರ್ಮಾಣಕ್ಕೆ ಸ್ಮೈಲ್ ಶ್ರೀನು ಸಜ್ಜು

ಕನ್ನಡ ಚಿತ್ರರಂಗದಲ್ಲಿ ರೀಲ್ ಕ್ಯಾಮೆರಾದಿಂದ ಡಿಜಿಟಲ್ ಕ್ಯಾಮೆರಾದವರೆಗೆ ಸಿನಿಮಾ ಮಾಡಿ ಗೆದ್ದಿರುವ ನಟ, ನಿರ್ದೇಶಕ ಹಾಗೂ ನಿರ್ಮಾಪಕ ಸ್ಮೈಲ್ ಶ್ರೀನು ಅವರು ಇದೀಗ AI, ವರ್ಚುಯೆಲ್ ಪ್ರೊಡಕ್ಷನ್ ಹಾ ಗೂ ಅತ್ಯಾಧುನಿಕ ತಂತ್ರಜ್ಞಾನಗಳ ಮೂಲಕ ಮುಂ ದಿನ ಪೀಳಿಗೆಯ ಚಿತ್ರ ನಿರ್ಮಾಣದತ್ತ ಹೊಸ ಹೆಜ್ಜೆ ಇಡುತ್ತಿದ್ದಾರೆ. ಈ ಹಿಂದೆ ತೂಫಾನ್, ಬಳ್ಳಾರಿ ದರ್ಬಾರ್, 18 to 25 ಹಾಗೂ ಓ ಮೈ ಲವ್ ಸೇರಿದಂತೆ ವಿಭಿನ್ನ ಚಿತ್ರಗಳನ್ನು ಕನ್ನಡಿಗರಿಗೆ ನೀಡಿರುವ ಸ್ಮೈಲ್ ಶ್ರೀನು, ಇದೀಗ ಸಿನಿಮಾ ನಿರ್ಮಾಣದ ಸಾಂಪ್ರದಾಯಿಕ ವಿಧಾನಗಳ ಜೊತೆಗೆ ಹೊಸ ತಂತ್ರಜ್ಞಾನವನ್ನು ಸಂಯೋಜಿಸಿ ವಿಭಿನ್ನ ಪ್ರಯೋಗಕ್ಕೆ ಮುಂದಾಗಿದ್ದಾರೆ. ಚಿತ್ರ ನಿರ್ಮಾಣದಲ್ಲಿ ಸಾಮಾನ್ಯವಾಗಿ ಎದುರಾಗುವ ಕಲಾವಿದರು, ತಂತ್ರಜ್ಞರು, ಲೊಕೇಶನ್, ಸಮಯ ಹಾಗೂ ಹೆಚ್ಚಿನ ವೆಚ್ಚದಂತಹ ಸವಾಲುಗಳಿಗೆ ಭವಿಷ್ಯದಲ್ಲಿ AI ಮತ್ತು ವರ್ಚುಯೆಲ್ ಪ್ರೊಡಕ್ಷನ್ ಹೊಸ ಪರಿಹಾರಗಳನ್ನು ನೀಡುವ ಸಾಧ್ಯತೆ ಇದೆ.



## 'ಸಂಬರಾಲ ಯೇಟಿ ಗಟ್ಟು' 2027ರ ಸಂಕ್ರಾಂತಿಗೆ ರಿಲೀಸ್

ಮೆಗಾ ಸುಪ್ರೀಂ ಹೀರೋ ಸಾಯಿ ದುರ್ಗಾ ತೇಜ್ ಅಭಿನಯದ ಬಹುನಿರೀಕ್ಷಿತ ಪ್ಯಾನ್-ಇಂಡಿಯಾ ಆಕ್ಷನ್-ಡ್ರಾಮಾ 'ಸಂಬರಾಲ ಯೇಟಿ ಗಟ್ಟು' (SYG) ಚಿತ್ರದ ಸಂಪೂರ್ಣ ಚಿತ್ರೀಕರಣ ಯಶಸ್ವಿಯಾಗಿ ಮುಕ್ತಾಯಗೊಂಡಿದೆ. ಪ್ರತಿಷ್ಠಿತ ಪ್ರೈಮ್‌ಶೋ ಎಂಟರ್‌ಟೈನ್‌ಮೆಂಟ್ ಬ್ಯಾನರ್‌ನಡಿಯಲ್ಲಿ ಕೆ. ನಿರಂಜನ್ ರೆಡ್ಡಿ ಹಾಗೂ ಚೈತನ್ಯ ರೆಡ್ಡಿ ಅತ್ಯಂತ ಅದ್ದೂರಿ ವೆಚ್ಚದಲ್ಲಿ ಈ ಚಿತ್ರವನ್ನು ನಿರ್ಮಿಸುತ್ತಿದ್ದು, ನೂತನ ಪ್ರತಿಭೆ ರೋಹಿತ್ ಕೆ.ಪಿ. ಕಥೆ, ಚಿತ್ರ ಕಥೆ ಬರೆದು ಆಕ್ಷನ್ ಕಟ್ ಹೇಳಿದ್ದಾರೆ. ಸದ್ಯ ಚಿತ್ರೀಕರಣ ಪೂರ್ಣಗೊಳಿಸಿರುವ ಚಿತ್ರತಂಡವು ಪೋಸ್ಟ್-ಪ್ರೊಡಕ್ಷನ್ ಕೆಲಸಗಳನ್ನು ಭರದಿಂದ ಮಾಡುತ್ತಿದೆ. 2027ರ ಜನವರಿ 12ರಂದು ಸಂಕ್ರಾಂತಿ ಹಬ್ಬದ ಕೊಡುಗೆಯಾಗಿ ಚಿತ್ರವನ್ನು ವಿಶ್ವಾದ್ಯಂತ ತೆರೆಗೆ ತರುವುದಾಗಿ ಅಧಿಕೃತವಾಗಿ ಚಿತ್ರತಂಡ ಪ್ರಕಟಿಸಿದೆ. ಚಿತ್ರದ ರಿಲೀಸ್ ಡೇಟ್ ಪೋಸ್ಟರ್ ಸಿನಿಪ್ರಿಯರಲ್ಲಿ ಭಾರಿ ಕುತೂಹಲ ಮೂಡಿಸಿದೆ. ಪೋಸ್ಟರ್‌ನಲ್ಲಿ ಸಾಯಿ ದುರ್ಗಾ ತೇಜ್ ಅವರು ಹಿಂದೆಂದೂ ಕಾಣದ ರಗಡ್ ಮತ್ತು ತೀವ್ರ ಲುಕ್‌ನಲ್ಲಿ ಅಬ್ಬರಿಸಿದ್ದಾರೆ.



## 'NH66' ಪ್ರಮೋದ್ ಶೆಟ್ಟಿ ಅವರ ಫಸ್ಟ್ ಲುಕ್ ಅನಾವರಣ

ರಾಯ ಫಿಲಂಸ್ ಲಾಂಛನದಲ್ಲಿ ಮಂಜುನಾಥ್ ಟಿ.ಆರ್. ನಿರ್ಮಿಸಿ ನಿರ್ದೇಶಿಸಿರುವ ಹಾಗೂ ಪ್ರಮೋದ್ ಶೆಟ್ಟಿ, ಶೃತಿ ಹರಿಹರನ್, ರಾಜೇಶ್ ನಟರಂಗ ಪ್ರಮುಖ ಪಾತ್ರದಲ್ಲಿ ನಟಿಸಿರುವ 'NH 66' ಚಿತ್ರದ ಚಿತ್ರೀಕರಣ ಮುಕ್ತಯವಾಗಿದೆ. ಪೋಸ್ಟ್ ಪ್ರೊಡಕ್ಷನ್ ವರ್ಕ್ ಸಹ ಪೂರ್ಣವಾಗಿದೆ. ಈ ಚಿತ್ರದ ಪ್ರಮುಖ ಪಾತ್ರಧಾರಿಗಳಲೊಬ್ಬರಾದ ಪ್ರಮೋದ್ ಶೆಟ್ಟಿ ಫಸ್ಟ್‌ಲುಕ್ ಅನಾವರಣವಾಗಿದೆ. ಪ್ರಮೋದ್ ಶೆಟ್ಟಿ ಅವರ ಫಸ್ಟ್‌ಲುಕ್ ವಿಶೇಷವಾಗಿದ್ದು, ಸಾಕಷ್ಟು ಕುತೂಹಲ ಮೂಡಿಸಿದೆ. 'NH66' ಚಿತ್ರದ ಹೆಸರೆ ಹೇಳುವಂತೆ ಒಂದು ಸಂಚಾರದ ಕಥೆ. ಮಂಗಳೂರಿನಿಂದ ಮುಂಬೈಗೆ ಹೋಗುವ ಮಧ್ಯೆ ನಡೆಯುವ 2 ದಿನಗಳ ಕಥೆ. ಈ ಚಿತ್ರದಲ್ಲಿ ಪ್ರಮೋದ್ ಶೆಟ್ಟಿ ಕ್ಯಾಬ್ ಡ್ರೈವರ್ ಪಾತ್ರದಲ್ಲಿ ಕಾಣಿಸಿಕೊಳ್ಳುತ್ತಿದ್ದಾರೆ.



## ಪೃಥ್ವಿರಾಜ್ ಸುಕುಮಾರನ್ ಅಭಿನಯದ ಚಿತ್ರ ಆಗಸ್ಟ್ 20ರಂದು ತೆರೆಗೆ

ಮಲಯಾಳಂ ಚಿತ್ರ 'ಖಲೀಫಾ'ದ ಟ್ರೈಲರ್ ಆಗಸ್ಟ್ 16ರಂದು ಬಿಡುಗಡೆಯಾಗಿದ್ದು, ಕೆಲವೇ ಗಂಟೆಗಳಲ್ಲಿ ಪ್ರೇಕ್ಷಕರಿಂದ ಭರ್ಜರಿ ಪ್ರತಿಕ್ರಿಯೆಯನ್ನು ಪಡೆದುಕೊಳ್ಳುತ್ತಿದೆ. ಪೃಥ್ವಿರಾಜ್ ಸುಕುಮಾರನ್ ಅವರ ಪವರ್‌ಫುಲ್ ಸ್ಕ್ರೀನ್ ಪ್ರೆಸೆನ್ಸ್, ಹೈ-ವೋಲ್ಟೇಜ್ ಆಕ್ಷನ್ ಹಾಗೂ ಚಿತ್ರದ ಅದ್ದೂರಿ ಮೇಕಿಂಗ್‌ಗೆ ಪ್ರೇಕ್ಷಕರು ಮೆಚ್ಚುಗೆ ವ್ಯಕ್ತಪಡಿಸುತ್ತಿದ್ದಾರೆ. ಪೃಥ್ವಿರಾಜ್ ಸುಕುಮಾರನ್ ಪ್ರಮುಖ ಪಾತ್ರದಲ್ಲಿ ನಟಿಸಿರುವ 'ಖಲೀಫಾ' ಒಂದು ಹೈ-ಆಕ್ಷನ್ ಥ್ರಿಲ್ಲರ್ ಆಗಿದ್ದು, ಶಕ್ತಿ, ಪ್ರತೀಕಾರ ಮತ್ತು ಸಂಘರ್ಷದ ಸುತ್ತ ಕಥೆ ಸಾಗಲಿದೆ. ಟ್ರೈಲರ್‌ನಲ್ಲಿ ಕಾಣಿಸಿಕೊಂಡಿರುವ ಭರ್ಜರಿ ಆಕ್ಷನ್ ದೃಶ್ಯಗಳು, ತೀವ್ರ ಮುಖಾಮುಖಿಗಳು ಹಾಗೂ ಪೃಥ್ವಿರಾಜ್ ಅವರ ವಿಭಿನ್ನ ಅವತಾರ ಚಿತ್ರದ ಮೇಲಿನ ನಿರೀಕ್ಷೆಯನ್ನು ಮತ್ತಷ್ಟು ಹೆಚ್ಚಿಸಿದೆ. ಚಿತ್ರದ ವಿಶೇಷ ಆಕರ್ಷಣೆಯಾಗಿರುವ ಮಲಯಾಳಂ ಸೂಪರ್‌ಸ್ಟಾರ್ ಮೋಹನ್‌ಲಾಲ್ ಅವರ ಉಪಸ್ಥಿತಿಯೂ ಪ್ರೇಕ್ಷಕರ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ.



ಕರಾವಳಿ ತರಂಗಿಣಿ

# ಸಿನಿ ತರಂಗಿಣಿ

## ಶಿವಣ್ಣ ಅಭಿನಯದ 'ಕೂರ್ಮಾವತಾರ್'



ಕರುನಾಡ ಚಕ್ರವರ್ತಿ ಡಾ. ಶಿವರಾಜ್‌ಕುಮಾರ್ ಮತ್ತೊಂದು ಬೃಹತ್ ಪ್ಯಾನ್–ಇಂಡಿಯಾ ಸಿನಿಮಾಗೆ ಗ್ರೀನ್ ಸಿಗ್ನಲ್ ನೀಡಿದ್ದಾರೆ. ಶ್ರೀ ಮಹಾವಿಷ್ಣುವಿನ ಎರಡನೇ ಅವತಾರವಾದ 'ಕೂರ್ಮಾವತಾರ'ದ ಕಥಾಹಂದರವನ್ನು ಆಧರಿಸಿ ಸಿದ್ಧವಾಗುತ್ತಿರುವ ಈ ಮಹತ್ವಾಕಾಂಕ್ಷೆಯ ಚಿತ್ರಕ್ಕೆ 'ಕೂರ್ಮಾವತಾರ್' ಎಂದು ನಾಮಕರಣ ಮಾಡಲಾಗಿದ್ದು, ಚಿತ್ರತಂಡ ಅಧಿಕೃತ ಟೈಟಲ್ ರಿವೀಲ್ ಟೀಸರ್ ಬಿಡುಗಡೆ ಮಾಡಿದೆ. ಭಾರತೀಯ ಚಿತ್ರರಂಗದ ಇತಿಹಾಸದಲ್ಲೇ ಕೂರ್ಮಾವತಾರದ ಹಿನ್ನೆಲೆಯುನ್ನು ಒಳಗೊಂಡ ಕಥೆಯನ್ನು ಪ್ರಧಾನವಾಗಿಟ್ಟುಕೊಂಡು ನಿರ್ಮಾಣವಾಗುತ್ತಿರುವ ಮೊದಲ ಸಿನಿಮಾ ಇದಾಗಿದ್ದು, ಈಗಾಗಲೇ ಬಿಡುಗಡೆ ಆಗಿರುವ ಟೀಸರ್ ಶಿವಣ್ಣನ ಅಭಿಮಾನಿಗಳಲ್ಲಿ ಭಾರಿ ಕುತೂಹಲ ಮೂಡಿಸಿದೆ. ಚಿತ್ರದಲ್ಲಿ ಶಿವರಾಜ್‌ಕುಮಾರ್ ಅವರ ಲುಕ್ ಹೇಗಿರಲಿದೆ ಎಂಬುದನ್ನು ನೋಡಲು ಅಭಿಮಾನಿಗಳು ಕಾತರದಿಂದ ಕಾಯುತ್ತಿದ್ದಾರೆ.

## 'ಜಿಲ್ಲಾಧಿಕಾರಿ' ಚಿತ್ರಕ್ಕೆ ಸೆಪ್ಟೆಂಬರ್‌ನಲ್ಲಿ ಚಾಲನೆ..



"ಎಕೆ47", "ಲಾಕಪ್ ಡೆತ್", "ಕಲಾಸಿಪಾಳ್ಯ", "ಹುಚ್ಚ" ಸೇರಿದಂತೆ ಸಾಕಷ್ಟು ಜನಪ್ರಿಯ ಚಿತ್ರಗಳನ್ನು ನಿರ್ದೇಶಿಸಿರುವ ಹಿರಿಯ ನಿರ್ದೇಶಕ ಓಂಪ್ರಕಾಶ್ ರಾವ್ ನಿರ್ದೇಶನದ "ಜಿಲ್ಲಾಧಿಕಾರಿ" ಚಿತ್ರದಲ್ಲಿ ಆದಿತ್ಯ ನಾಯಕರಾಗಿ ನಟಿಸುತ್ತಿದ್ದಾರೆ. ವರಮಹಾಲಕ್ಷ್ಮೀ ಹಬ್ಬದ ಸಂದರ್ಭದಲ್ಲಿ ಈ ನೂತನ ಚಿತ್ರದ ಘೋಷಣೆಯಾಗಿದೆ. ಈ ಚಿತ್ರದ ಚಿತ್ರೀಕರಣ ಸೆಪ್ಟೆಂಬರ್ ಮೊದಲವಾರ ಆರಂಭವಾಗಲಿದೆ. ಇದೊಂದು ಪಕ್ಕಾ ಮಾಸ್ ಹಾಗೂ ಕಮರ್ಷಿಯಲ್ ಚಿತ್ರವಾಗಿದ್ದು, ಕೆಲವು ನೈಜ ಘಟನೆಗಳು ಈ ಚಿತ್ರದ ಕಥೆಗೆ ಸ್ಫೂರ್ತಿ ಎನ್ನುತ್ತಾರೆ ಓಂಪ್ರಕಾಶ್ ರಾವ್. ಒಪಿಆರ್ ಪಿಕ್ಚರ್ಸ್ ಲಾಂಛನದಲ್ಲಿ ಲಲಿತಮ್ಮ ಹಾಗೂ ಸುಶೀಲ (ತಿಪಟೂರು) ಅರ್ಪಿಸುತ್ತಿರುವ ಈ ಚಿತ್ರವನ್ನು ಉಮೇಶ್ ಸಕ್ಕರೆನಾಡು ನಿರ್ಮಾಣ ಮಾಡುತ್ತಿದ್ದಾರೆ. ರವಿಕುಮಾರ್ ಛಾಯಾಗ್ರಹಣ, ವಿ.ಹರಿಕೃಷ್ಣ ಸಂಗೀತವಿದೆ.

## ಅನಿರೀಕ್ಷಿತ ಹಾಡಿನೊಂದಿಗೆ ಅತಿಥಿಗಳ ಆಗಮನ!

ಅನಿರೀಕ್ಷಿತ ಅತಿಥಿಗಳು ಎನ್ನುವುದು ಸಿನಿಮಾದ ಹೆಸರು. ಚಿತ್ರದ ಹೆಸರಿಗೂ ಕ್ರೈಮ್ ಜಾನಾರಿಗೂ ಸಂಬಂಧವೇ ಇಲ್ಲ ಎಂದುಕೊಂಡಿರುವಾಗಲೇ ಹಾಡುಗಳು ಇನ್ನಷ್ಟು ಕುತೂಹಲ ಸೃಷ್ಟಿಸುವ ರೀತಿಯಲ್ಲಿ ಮೂಡಿ ಬಂದಿವೆ. ಹಾಡುಗಳ ಬಿಡುಗಡೆಯ ಸುದ್ದಿಗೋಷ್ಠಿಯಲ್ಲಿ ಚಿತ್ರ ಮುಂದಿನ ತಿಂಗಳು ಅಂದರೆ ಸಪ್ಟೆಂಬರ್ 18ಕ್ಕೆ ರಿಲೀಸ್ ಆಗಲಿರುವುದಾಗಿಯೂ ಮಾಹಿತಿ ಹಂಚಿಕೊಂಡರು. ಆರು ಪ್ರಮುಖ ಪಾತ್ರಗಳನ್ನು ಕೇಂದ್ರವಾಗಿಸಿರುವ ಈ ಚಿತ್ರವನ್ನು ನವ ನಿರ್ದೇಶಕ ಮನೋಜ್ ಅಣ್ಣಯ್ಯ ನಿರ್ದೇಶಿಸಿದ್ದಾರೆ. ಬಿ ವಿನೋದ್ ಕುಮಾರ್ ನಿರ್ಮಾಣದ ಈ ಚಿತ್ರದಲ್ಲಿ 4 ಪ್ರಮುಖ ಹಾಡುಗಳಿವೆ. ಸ್ವಾಮಿನಾಥನ್ ಆರ್.ಕೆ ಸಂಗೀತದಲ್ಲಿ ಒಂದು ಲಿರಿಕಲ್ ಹಾಡು ಬಿಡುಗಡೆಯಾಗಿದೆ. ಇನ್ನೊಂದು ಪಾಪ್ ಗೀತೆಯನ್ನು ಗಾಯಕಿ ಸಿರಿಕಟ್ಟೆಯವರು ಅದ್ಭುತವಾಗಿ ಹಾಡಿದ್ದಾರೆ. ಹಾಡು ಪೂರ್ತಿಯಾಗಿ ಆಂಗ್ಲದಲ್ಲಿದೆ.



## ಪ್ರೇಮದ ಊರಲ್ಲೊಂದು ಸುಂದರ ಗೀತೆ

'ಅಕ್ಷಿ' ಚಿತ್ರಕ್ಕೆ ರಾಷ್ಟ್ರ ಪ್ರಶಸ್ತಿ ಪಡೆದು ಸ್ಯಾಂಡಲ್‌ವುಡ್‌ನಲ್ಲಿ ಗಮನ ಸೆಳೆದಿದ್ದ ನಿರ್ದೇಶಕ ಮನೋಜ್ ಕುಮಾರ್ ಅವರ ನಿರ್ದೇಶನದಲ್ಲಿ ಮೂಡಿಬರುತ್ತಿರುವ 'ಪ್ರೇಮದ ಊರಲಿ' ಚಿತ್ರದ ಟೈಟಲ್ ಟ್ರ್ಯಾಕ್ ಸೇರಿದಂತೆ ಎಲ್ಲಾ ಹಾಡುಗಳು ಈಗಾಗಲೇ ದೊಡ್ಡ ಹಿಟ್ ಆಗಿವೆ. ಇದೀಗ ಈ ಚಿತ್ರದ ಹೊಸ ಹಾಡು ಬಿಡುಗಡೆಯಾಗಿದೆ. "ಬಾನಲಿ ಜಾರಿದ..." ಎಂಬ ಈ ಸುಮಧುರ ಪ್ರಣಯ ಯುಗಳ ಗೀತೆಯಲ್ಲಿ ನಾಯಕ ಶ್ರೀರಾಮ್ (ಸಂತೋಷ್) ಹಾಗೂ ನಟಿ ತಪಸ್ವಿನಿ ಪೂಣಚ್ಚ (ರುಕ್ಮಿಣಿ) ಜೋಡಿಯಾಗಿ ಕಣ್ಮನ ಸೆಳೆದಿದ್ದು, ತಪಸ್ವಿನಿ ಅವರ ಮುದ್ದಾದ ಅಭಿನಯಕ್ಕೆ ಪ್ರೇಕ್ಷಕರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಈ ಹಾಡಿಗೆ ಅಭಿಜಿತ್ ತೀರ್ಥಹಳ್ಳಿ ಸಾಹಿತ್ಯ ಬರೆದಿದ್ದು, ಸುನಾದ ಗೌತಮ್ ಅವರ ಸಂಗೀತ ನಿರ್ದೇಶನದಲ್ಲಿ ನಿನಾದ ನಾಯಕ್ ಮತ್ತು ರಜತ್ ಹೆಗ್ಡೆ ಧ್ವನಿಯಾಗಿದ್ದಾರೆ.











KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021